₹ 6 @vishwavaninews epaper.vishwavani.news vishwavani.news ಬೆಂಗಳೂರು | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ ಶುಕ್ರವಾರ 16.01.2026 ಸಂಪುಟ: 11 ಸಂಚಿಕೆ: 02 ಪುಟಗಳು: 12 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಗೋವಿನೊಂದಿಗೆ ಪ್ರಧಾನಿ ಸಂಕ್ರಾಂತಿ

ದೇಶದ ಅತ್ಯಂತ ಕಿರಿಯ ಹಸುವಿನ ತಳಿ ಎಂದು ಖ್ಯಾತವಾಗಿರುವ ಆಂಧ್ರಪ್ರದೇಶದ ಪುಂಗನೂರು ಹಸುಗಳಿಗೆ ಪ್ರಧಾನಿ ನರೇಂದ್ರ ಮೋದಿ ಸಂಕ್ರಾಂತಿ ಪ್ರಯುಕ್ತ ತಮ್ಮ ದೆಹಲಿ ನಿವಾಸದಲ್ಲಿ ಹುಲ್ಲು ತಿನ್ನಿಸಿದರು.

ಸೊಂಪಾದ ಪುಟಗಳು

ಡಿಪ್ರೆಶನ್: ಬದುಕಿ ಪ್ರಯೋಜನ ವೇನು? ಎಂಬ ಯಕ್ಷಪ್ರಶ್ನೆ!

ಶಿಶಿರಕಾಲ
ಶಿಶಿರ್ ಹೆಗಡೆ 6



ಒಂದು ಹಡಗಿನ ತುಂಬಾ ರಫ್ತಾದ ನುಗ್ಗೆಗಿಡದ ಬೀಜ!

ಶಶಾಂಕಣ
ಶಶಿಧರ ಹಾಲಾಡಿ 7

ದಾರಿದೀಪೋಕ್ತಿ

ಬಾಳಿನ ಹಾದಿಯಲ್ಲಿ ಸೋಲು ಎಂಬುದು ಕೊನೆಯಲ್ಲ, ಅದು ಹೊಸ ಪಾಠದ ಆರಂಭವಷ್ಟೇ. ಸೂರ್ಯನು ಮುಳುಗುವುದು ನಾಳೆ ಮತ್ತೆ ಪ್ರಖರವಾಗಿ ಉದಯಿಸಲಿಕ್ಕಾಗಿಯೇ ಹೊರತು ಕತ್ತಲಲ್ಲಿ ಕಳೆದುಹೋಗಲು ಅಲ್ಲ. ನಿಮ್ಮ ಗುರಿಯ ಮೇಲೆ ನಂಬಿಕೆಯಿರಲಿ ಮತ್ತು ಪ್ರತಿ ಹೆಜ್ಜೆಯಲ್ಲೂ ತಾಳ್ಮೆಯಿರಲಿ.

ವಕ್ರತುಂಡೋಕ್ತಿ

ಬೆಂಗಳೂರು ಟ್ರಾಫಿಕ್‌ಜಾಮ್‌ನ ಒಂದು ಲಾಭವೆಂದರೆ, ಪಕ್ಕದ ಕಾರಿನವರು ಪರಿಚಿತರಾಗಿ, ಸ್ನೇಹಿತರಾಗುತ್ತಾರೆ.

ಹಜಾರೆ: ರಾಜ್ಯಕ್ಕೆ ಸೆಮೀಸ್ ಸೋಲು

ಬೆಂಗಳೂರು: ಇಲ್ಲಿ ಗುರುವಾರ ನಡೆದ ವಿಜಯ್ ಹಜಾರೆ ಏಕದಿನ ಟ್ರೋಫಿ ಸೆಮಿ ಫೈನಲ್‌ನಲ್ಲಿ ಕರ್ನಾಟಕ ಸೋತು ಫೈನಲ್‌ನಿಂದ ಹೊರಬಿದ್ದಿದೆ. ಕರುಣ್ ನಾಯರ್ ಉತ್ತಮ ಬ್ಯಾಟಿಂಗ್ ನೆರವಿನಿಂದ ಕರ್ನಾಟಕ 280 ರನ್‌ಗಳ ಬೃಹತ್ ಮೊತ್ತ ಪೇರಿಸಿತು. 4 ವಿಕೆಟ್‌ಗೆ 284 ರನ್ ಗಳಿಸಿದ ವಿದರ್ಭ ಫೈನಲ್‌ಗೇರಿತು.

ಮುಲ್ಲಾಗಳೇ ತೊಲಗಿ ಆಗ್ರಹ ತೀವ್ರ | ಶವ ತೆರವು ಮಾಡಲು ಜೆಸಿಬಿ ಬಳಕೆ
ಹೋರಾಟ ಇನ್ನೂ ಜೋರು | ತಮ್ಮವರನ್ನೇ ಕೊಲ್ಲಲು ಇರಾನಿ ಯೋಧರ ನಕಾರ
ಇರಾಖ್‌ನಿಂದ ಸೇನೆಯನ್ನು ಕರೆಸಿಕೊಂಡಿದೆ ಖಮೇನಿ ಸರ್ವಾಧಿಕಾರಿ ಆಡಳಿತ?

ಇರಾನ್ ಭುಗಿಲಿಗೆ 3500 ಮಂದಿ ಬಲಿ

ಟೆಹರಾನ್: ದೇಶದ ಆರ್ಥಿಕ ಪರಿಸ್ಥಿತಿ ವಿಪರೀತ ಹದಗೆಟ್ಟಿರುವುದರಿಂದ ಆಕ್ರೋಶಗೊಂಡು ಅಲ್ಲಿನ ಧಾರ್ಮಿಕ ನಾಯಕ ಆಯತೊಲ್ಲಾ ಅಲ್ ಖಮೇನಿ ಆಡಳಿತದ ವಿರುದ್ಧ ಜನ ನಡೆಸುತ್ತಿರುವ ಪ್ರತಿಭಟನೆ ವಿಕೋಪಕ್ಕೆ ಹೋಗಿದೆ. ಇದಕ್ಕೆ ಪ್ರತಿಯಾಗಿ ಜನರನ್ನು ಕುರಿಗಳನ್ನು ಕೊಂದಂತೆ ಕೊಲ್ಲುವ ಕಾಯಕವನ್ನು ಇರಾನ್ ಸರಕಾರ ಮುಂದುವರಿಸಿದೆ. ಸದ್ಯದ ಸ್ಥಿತಿಯಲ್ಲಿ ಮೃತಪಟ್ಟವರ ಸಂಖ್ಯೆ 3500 ಅನ್ನು ದಾಟಿದೆ, ಬಂಧಿತರ ಸಂಖ್ಯೆ 20000 ದಾಟಿದೆ. 1980ರಲ್ಲಿ ಮಾಡಿದಂತೆ ಇರಾನ್ ಆಡಳಿತ ಈಗಲೂ ಪ್ರತಿಭಟನಾಕಾರರನ್ನು ಕ್ರೂರವಾಗಿ ಹತ್ತಿಕ್ಕುತ್ತಿದೆ ಎಂದು ಮೂಲಗಳು ಹೇಳಿವೆ.

ಇರಾನಿನ 31 ಪ್ರಾಂತ್ಯಗಳ 614 ಸ್ಥಳಗಳಲ್ಲಿ ಪ್ರತಿಭಟನೆ ತೀವ್ರವಾಗಿದೆ. ಮುಲ್ಲಾಗಳೇ ತೊಲಗಿ ಎಂಬ ಆಗ್ರಹ ಜಾಸ್ತಿಯಾಗಿದೆ. ರಸ್ತೆಗಳಲ್ಲಿ ರಾಶಿಬಿದ್ದಿರುವ ಹೆಣಗಳನ್ನು ತೆರವುಗೊಳಿಸಲು ಜೆಸಿಬಿಯನ್ನು ಬಳಸಲಾಗುತ್ತಿದೆ ಎಂದು ಹೇಳಲಾಗಿದೆ. ಇನ್ನೊಂದು ಕಡೆ ಅಮೆರಿಕ ಕತಾರ್‌ನಲ್ಲಿನ ತನ್ನ ನೆಲೆಯಿಂದ ತನ್ನ ಸೇನೆಯನ್ನು ಕಡಿತ ಮಾಡಿದೆ. ಇರಾನ್ ದಾಳಿ ಮಾಡುವ ಬೆದರಿಕೆ ಹಾಕಿರುವುದೇ ಇದಕ್ಕೆ ಕಾರಣ. ಒಂದು ವೇಳೆ ಪ್ರತಿಭಟನಾಕಾರರನ್ನು ಕೊಲ್ಲುವುದು, ಮರಣದಂಡನೆ ನೀಡುವುದನ್ನು ಮಾಡಿದರೆ ಅಮೆರಿಕ ಸೇನೆ ಇರಾನ್ ಮೇಲೆ ದಾಳಿ ಮಾಡಲಿದೆ ಎಂದು ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿದ್ದಾರೆ. ಪರಿಸ್ಥಿತಿ ಕೈಮೀರುತ್ತಿರುವುದನ್ನು ಗಮನಿಸಿರುವ

ಚೀನಾ, ಫ್ರಾನ್ಸ್‌ನಂತಹ ದೇಶಗಳು ಮಾತುಕತೆ ಮೂಲಕ ಸಮಸ್ಯೆ ಪರಿಹರಿಸಿಕೊಳ್ಳಲು ಆಗ್ರಹಿಸಿವೆ. ಇನ್ನು ವಿಶ್ವಸಂಸ್ಥೆ ಇರಾನ್ ಅಧಿಕಾರಿಗಳೊಂದಿಗೆ ಮಾತನಾಡಲು ಸಿದ್ಧವಾಗಿವೆ.

ಇರಾಖ್‌ನಿಂದ ಯೋಧರ ಆಮದು: ಈ ನಡುವೆ ಆತಂಕಕಾರಿ ಸುದ್ದಿಯೊಂದು ವರದಿಯಾಗಿದೆ. ಇರಾನ್‌ನೊಳಗಿನ ಪ್ರತಿಭಟನೆಯನ್ನು ಹತ್ತಿಕ್ಕಲು ಸರ್ವಾಧಿಕಾರಿ ಆಯತೊಲ್ಲಾ ಅಲ್ ಖಮೇನಿ ಆಡಳಿತ ಪಕ್ಷದ ಇರಾಖ್‌ನಿಂದ ಸೇನೆಯನ್ನು ಕರೆಸಿಕೊಳ್ಳುತ್ತಿದೆ ಎಂದು ಹೇಳಲಾಗಿದೆ. ಅದರ ಪರಿಣಾಮವೇ ಇರಾನ್‌ನಲ್ಲಿ ಸಾವಿನ ಸಂಖ್ಯೆ ಮಿತಿಮೀರಿ ಹೋಗಿದೆ ಎಂದು ಮೂಲಗಳು ಹೇಳಿವೆ.

→ 4

ಇರಾನಿಗರಿಗೆ ಎಲಾನ್ ಮಸ್ಕ್ ಕಂಪನಿಯಿಂದ ಉಚಿತ ನೆಟ್

ಜನರಿಗೆ ಅಂತರ್ಜಾಲ ಸಿಗದಂತೆ ಇರಾನ್ ಸರಕಾರ ದಿಗ್ಬಂಧನ ವಿಧಿಸಿದ್ದರೂ, ಎಲಾನ್ ಮಸ್ಕ್ ಒಡೆತನದ ಸ್ಟಾರ್‌ಲಿಂಕ್ ಉಚಿತವಾಗಿ ಅಂತರ್ಜಾಲದ ಸೇವೆ ನೀಡುತ್ತಿದೆ ಎನ್ನಲಾಗಿದೆ. ರಿಸೀವರ್‌ಗಳ ಸಮೇತ ನೆಟ್ ಪೂರೈಸಲಾಗುತ್ತಿದೆ. ಇರಾನ್ ಸರಕಾರ ಈ ಸೇವೆಯನ್ನು ಕಡಿತಗೊಳಿಸದಂತೆ ತಂತ್ರಜ್ಞಾನದ ನೆರವನ್ನೂ ಒದಗಿಸಿದೆ. ಪ್ರತಿಭಟನೆ ಜೋರಾಗಲು ಇದೂ ಮುಖ್ಯ ಕಾರಣಗಳಲ್ಲೊಂದು ಎಂದು ವಿಶ್ಲೇಷಿಸಲಾಗಿದೆ.

ಇಂದಿನಿಂದ ಭಾರತೀಯರ ತೆರವು

ಇರಾನ್‌ನಿಂದ ಭಾರತೀಯರ ತೆರವಿಗೆ ಕೇಂದ್ರ ಸರಕಾರ ಕಾರ್ಯಾಚರಣೆ ಶುರು ಮಾಡಿದೆ. ಸದ್ಯದ ಮಾಹಿತಿ ಪ್ರಕಾರ ಭಾರತೀಯರನ್ನು ಹೊತ್ತ ವಿಮಾನಗಳು ಶುಕ್ರವಾರ ದೇಶಕ್ಕೆ ಆಗಮಿಸಲಿವೆ. ಇರಾನ್‌ನಲ್ಲಿ ಅಂತರ್ಜಾಲವನ್ನು ಬಹುತೇಕ ಕಡೆ ಸ್ತಬ್ಧಗೊಳಿಸಿರುವುದರಿಂದ ಭಾರತೀಯರು ಎಲ್ಲಿದ್ದಾರೆ ಎಂಬ ಮಾಹಿತಿ ಸಿಗುತ್ತಿಲ್ಲ, ದೂರವಾಣಿ ಕರೆಗಳನ್ನು ನಂಬಲು ಆಗುತ್ತಿಲ್ಲ. ಹಾಗಾಗಿ ಭಾರತೀಯ ರಾಜತಾಂತ್ರಿಕ ಅಧಿಕಾರಿಗಳು ಖುದ್ದಾಗಿ ಓಡಾಡಿ ವಿದ್ಯಾರ್ಥಿಗಳನ್ನು ಸುರಕ್ಷಿತಗೊಳಿಸುವ ಕೆಲಸದಲ್ಲಿ ತೊಡಗಿದ್ದಾರೆ.

ಭಾರತೀಯ ವಿಮಾನ ಅತಂತ್ರ: ಇರಾನ್ ತನ್ನ ನಾಗರಿಕ ವಿಮಾನಯಾನ ವಾಯುನೆಲೆಯನ್ನು ಕಾರ್ಯಾಚರಣೆಗೆ ಮುಕ್ತಗೊಳಿಸಿದ ನಂತರ, ಕಾಶ್ಮೀರಿ ವಿದ್ಯಾರ್ಥಿಗಳನ್ನು ಹೊತ್ತ ವಿಮಾನ ಗುರುವಾರವೇ ಭಾರತಕ್ಕೆ ಬರಬೇಕಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ಅಲ್ಲೇ ಉಳಿದಿರುವ ವಿಮಾನ ಬೆಳಗ್ಗೆ 8 ಗಂಟೆಗೆ ಭಾರತಕ್ಕೆ ಹಾರುವ ಸಾಧ್ಯತೆಯಿದೆ.

ದಲಿತರು ಸಿಎಂ ಆಗದ ನೋವಿದೆ: ಸಚಿವ ಮುನಿಯಪ್ಪ
ಸಿದ್ದು–ಡಿಕೆ ಕುರ್ಚಿ ಕಾದಾಟದ ನಡುವೆಯೇ ಹೊಸದನಿ

ಕಾಂಗ್ರೆಸ್‌ನಲ್ಲಿ ಮತ್ತೆ ದಲಿತ ಸಿಎಂ ಜಪ

ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಹುಲ್ ಗಾಂಧಿ ನಡುವೆ ನಡೆದಿರುವ ಸಂಭಾಷಣೆ, ದೆಹಲಿಗೆ ಡಿ.ಕೆ. ಶಿವಕುಮಾರ್ ಪ್ರಯಾಣದ ಬೆನ್ನಲ್ಲೇ ಕಾಂಗ್ರೆಸ್‌ನಲ್ಲಿ ಮತ್ತೆ ದಲಿತ ಸಿಎಂ ಜಪ ಶುರುವಾಗಿದೆ. ಈಗಾಗಲೇ ಗೃಹಸಚಿವ ಪರಮೇಶ್ವರ್ ನನಗೂ ಮುಖ್ಯಮಂತ್ರಿ ಆಗುವ ಬಯಕೆಯಿದೆ ಎಂದಿದ್ದಾರೆ. ಅದರ ಬೆನ್ನಲ್ಲೇ ಸಚಿವ ಕೆ.ಎಚ್. ಮುನಿಯಪ್ಪ ದಲಿತ ಸಿಎಂ ಬೇಕು ಎಂಬ ಬಲವಾದ ಆಗ್ರಹ ಮುಂದಿಟ್ಟಿದ್ದಾರೆ. ನಾಯಕತ್ವ ಬದಲಾವಣೆ ಕೂಗು ಮುನ್ನೆಲೆಗೆ ಬರುತ್ತಿದ್ದಂತೆ ದಲಿತ ಮುಖ್ಯಮಂತ್ರಿಯ ಕೂಗು ಜೋರಾಗುತ್ತಿರುವುದು ಇದೇ ಮೊದಲಲ್ಲ. ಆದರೆ 'ಐದು ವರ್ಷಕ್ಕೆ ಸಿದ್ದು ಸಿಎಂ' ಎನ್ನುವ ಹೇಳಿಕೆಯ ಹೊರತಾಗಿಯೂ ದಲಿತ ಸಿಎಂ ವಿಷಯ ಪ್ರಸ್ತಾಪವಾಗಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಕೆ.ಎಚ್.ಮುನಿಯಪ್ಪ, ದಲಿತರೊಬ್ಬರು ಮುಖ್ಯಮಂತ್ರಿಯಾಗಿಲ್ಲ ಎನ್ನುವ ನೋವು ನಮಗಿದೆ. ಹೈಕಮಾಂಡ್ ಮನಸ್ಸು ಮಾಡಿದರೆ ಎಲ್ಲವೂ ಆಗುತ್ತದೆ. ಹೈಕಮಾಂಡ್‌ಗೆ ಯಾವ ಕಾಲದಲ್ಲಿ ಏನು ತೀರ್ಮಾನ ಮಾಡಬೇಕು ಎಂಬುದು ಗೊತ್ತಿದೆ. ಈಗ ತೀರ್ಮಾನ ಮಾಡುವ ಸ್ಥಾನದಲ್ಲಿ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆಯವರೇ ಕುಳಿತಿದ್ದಾರೆ. ನಾವು ಇನ್ನೇನು ಮಾತನಾಡುವುದು ಎಂದರು.

ರಾಜ್ಯದಲ್ಲಿ ಶೇ.25ರಷ್ಟು ಪರಿಶಿಷ್ಟ ಜಾತಿ

ದೆಹಲಿಗೆ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಹೋಗುವುದು, ಹೋಗದಿರುವುದು ಅವರಿಗೆ ಬಿಟ್ಟ ವಿಚಾರ. ಮೊನ್ನೆ ರಾಹುಲ್ ಗಾಂಧಿ ಅವರು ಮೈಸೂರಿನಲ್ಲಿ ಇಬ್ಬರನ್ನು ಕರೆದು ಮಾತನಾಡಿದ್ದಾರೆ. ಯಾವುದೇ ಗೊಂದಲವಿದ್ದರೂ ಹೈಕಮಾಂಡ್ ಕರೆದು ಮಾತನಾಡುತ್ತೆ. ಎಲ್ಲವೂ ಇತ್ಯರ್ಥವಾಗಲಿದೆ.
-ಕೆ.ಎಚ್.ಮುನಿಯಪ್ಪ, ಸಚಿವ

ಸಮುದಾಯದವರಿದ್ದಾರೆ. ಇವರಲ್ಲಿ ಶೇ.75 ರಷ್ಟು ಮಂದಿ ಕಾಂಗ್ರೆಸ್‌ಗೆ ಮತ ಹಾಕುತ್ತಾರೆ. ಇವೆಲ್ಲ ವನ್ನೂ ಹೈಕಮಾಂಡ್‌ಗೆ ಮನವರಿಕೆ ಮಾಡಿಕೊಟ್ಟಿದ್ದೇವೆ.

ಆದರೂ ದಲಿತರು ಇದುವರೆಗೂ ಸಿಎಂ ಆಗದಿರುವ ಬಗ್ಗೆ ನಮಗೂ ನೋವಿದೆ. ಈ ಹಂತದಲ್ಲಿ ನಾನು ಮುಖ್ಯಮಂತ್ರಿ ಪರವೂ ಇಲ್ಲ, ವಿರೋಧವೂ ಇಲ್ಲ. ಹಾಗೆಯೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪರನೂ ಇಲ್ಲ, ವಿರೋಧನೂ ಇಲ್ಲ. ಉಪಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಒಳ್ಳೆಯ ಕೆಲಸ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಾ ಇತಿಹಾಸ ಸೃಷ್ಟಿ ಮಾಡಿದ್ದಾರೆ ಎಂದರು.

ಇಂದು ದೆಹಲಿಗೆ ಡಿ.ಕೆ.ಶಿವಕುಮಾರ್

ರಾಹುಲ್ ಗಾಂಧಿ ಅವರ 'ವಿಲ್ ಕಾಲ್ ಯೂ ಸೂನ್' ಎನ್ನುವ ಮಾತು ಡಿಕೆ ಆಪ್ತರಿಗೆ ಆನೆ ಬಲ ನೀಡಿದಂತಾಗಿದೆ. ಈ ನಡುವೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಶುಕ್ರವಾರ ದೆಹಲಿಗೆ ತೆರಳುತ್ತಿರುವುದು ಕುತೂಹಲಕ್ಕೆ ಕಾರಣವಾಗಿದೆ. ಈ ಹಿಂದೆ 19ಕ್ಕೆ ದೆಹಲಿಗೆ ಡಿಕೆ ತೆರಳಲಿದ್ದಾರೆ ಎನ್ನಲಾಗಿತ್ತು. ಆದರೀಗ ಶುಕ್ರವಾರ ದೆಹಲಿಗೆ ತೆರಳಿದ್ದಾರೆ. ಅಸ್ಸಾಂ ವಿಧಾನಸಭಾ ಚುನಾವಣಾ ಸಭೆ, ನರೇಗಾ ಸಂಬಂಧ ಸಭೆಯ ಹೊರತಾಗಿಯೂ ಡಿ.ಕೆ.ಶಿವಕುಮಾರ್ ಅವರ ಈ ದೆಹಲಿ ಭೇಟಿ ಹಲವು ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗುತ್ತಿದೆ. ಅಸ್ಸಾಂ ವಿಧಾನಸಭಾ ಚುನಾವಣಾ ಸಭೆಯಲ್ಲಿ ಭಾಗವಹಿಸಿದ ಬಳಿಕ ರಾಜ್ಯ ರಾಜಕೀಯಕ್ಕೆ ಸಂಬಂಧಿಸಿದಂತೆ ಚರ್ಚಿಸಲಿದ್ದಾರೆ ಎನ್ನಲಾಗಿದೆ.

ಸಿದ್ದರಾಮಾನಂದ ಶ್ರೀ ದೇಹತ್ಯಾಗ: ಸಿಎಂ ಕಂಬನಿ

ರಾಯಚೂರು: ಗುರುವಾರ ಮುಂಜಾನೆ ಹೃದಯಾಘಾತದಿಂದ ದೇಹತ್ಯಾಗ ಮಾಡಿದ ರಾಯಚೂರಿನ ತಿಂಥಣಿ ಬ್ರಿಡ್ಜ್ ಕನಕ ಗುರುಪೀಠದ ಸಿದ್ದರಾಮಾನಂದ ಸ್ವಾಮೀಜಿಯ ಅಂತ್ಯ ಕ್ರಿಯೆ ಸಕಲ ಸರಕಾರಿ ಗೌರವಗಳೊಂದಿಗೆ ನೆರವೇರಿತು. ಮಠದ ಪ್ರಾಂಗಣದಲ್ಲಿ ಸ್ವಾಮೀಜಿ ಅಂತ್ಯ ಕ್ರಿಯೆ ನಡೆಯಿತು. ಪೊಲೀಸ್ ಪಡೆ ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸುವ ಮೂಲಕ ಗೌರವ ವಂದನೆ ಸಲ್ಲಿಸಿದರು. ಸರಕಾರದ ಪರವಾಗಿ ಸಚಿವರಾದ ಬೈರತಿ ಸುರೇಶ್, ಎನ್.ಎಸ್.ಬೋಸರಾಜು ಭಾಗಿಯಾಗಿದ್ದರು. ಸಚಿವ ಬೈರತಿ ಸುರೇಶ್ ಸ್ವಾಮೀಜಿಗೆ ರಾಷ್ಟ್ರಧ್ವಜ ಸಮರ್ಪಿಸಿದರು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಶಿವಕುಮಾರ್ ಕಂಬನಿ ಮಿಡಿದಿದ್ದಾರೆ. ಬಾಲ್ಯದಿಂದಲೇ ಸಿದ್ದರಾಮಾನಂದ ಶ್ರೀಗಳಿಗೆ ಅಧ್ಯಾತ್ಮದಲ್ಲಿ ತೀವ್ರ ಒಲವಿತ್ತು. ಆಗಲೇ ಅವರು ಹಲವಾರು ಧಾರ್ಮಿಕ ಸಂಸ್ಥೆಗಳಲ್ಲಿ ಓಡಾಡಿದ್ದರು.

ಕಡಲೆ ಕಾಳಿಗೆ ಬೆಂಬಲ ಹೆಚ್ಚಿಸಿ: ಕೇಂದ್ರಕ್ಕೆ ಪತ್ರ

ಬೆಂಗಳೂರು: ರಾಜ್ಯ ಕಡಲೆ ಬೆಳೆಗಾರರು ಸಂಕಷ್ಟದಲ್ಲಿದ್ದೂ, ಕೂಡಲೇ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಆಗ್ರಹಿಸಿದ್ದಾರೆ. ಈ ಸಂಬಂಧ ಪತ್ರ ಬರೆದಿರುವ ಸಿದ್ದರಾಮಯ್ಯ ಅವರು, 'ಕರ್ನಾಟಕದಲ್ಲಿ ಕಡಲೆ ಬೆಳೆಯುವ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ. ಕ್ವಿಂಟಲ್ ಕಡಲೆ ಕಾಳಿಗೆ 5,875 ರು. ಕನಿಷ್ಠ ಬೆಂಬಲ ಬೆಲೆಯಿದೆ. ಆದರೆ, ಮಾರುಕಟ್ಟೆ ಬೆಲೆಗಳು ಎಂಎಸ್‌ಪಿಗಿಂತ ತೀರಾ ಕಡಿಮೆಯಾಗಿದ್ದು, ರೈತರು ಮಾರಾಟದಲ್ಲಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಆದಾಯವನ್ನು ರಕ್ಷಿಸಲು ಮತ್ತು ಮಾರುಕಟ್ಟೆಯನ್ನು ಸ್ಥಿರಗೊಳಿಸಲು ಬೆಲೆ ಬೆಂಬಲ ಯೋಜನೆಯಲ್ಲಿ ಖರೀದಿಯನ್ನು ತಕ್ಷಣವೇ ಪ್ರಾರಂಭಿಸಬೇಕು ಎಂದು ಆಗ್ರಹಿಸಿದ್ದಾರೆ. ರಾಜ್ಯದ ರೈತರು ಎದುರಿಸುತ್ತಿರುವ ಕಷ್ಟದ ಪರಿಸ್ಥಿತಿಯನ್ನು ಅವರು ವಿವರಿಸಿದ್ದಾರೆ.

ಸಕಾಲದಲ್ಲಿ ರಾಜ್ಯಕಾರಣಕ್ಕೆ ಬರುವೆ: ಎಚ್‌ಡಿಕೆ

ಬೆಂಗಳೂರು: ರಾಜ್ಯ ರಾಜಕೀಯದಿಂದ ದೂರ ಸರಿಯುವುದಿಲ್ಲ. ನಾನು ಎಲ್ಲಿರಬೇಕು ಎಂದು ತೀರ್ಮಾನ ಮಾಡುವುದು ರಾಜ್ಯದ ಜನತೆ. ರಾಜ್ಯ ರಾಜಕೀಯಕ್ಕೆ ಯಾವಾಗ ಬರಬೇಕು ಎಂದು ಜನತೆಯ ಆಶಯದ ಮೇರೆಗೆ ತೀರ್ಮಾನ ಮಾಡುತ್ತೇನೆ ಎಂದು ಕೇಂದ್ರದ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು. ಬೆಂಗಳೂರಿನ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿ, ನಾವು ಎನ್‌ಡಿಎ ಮೈತ್ರಿಯಲ್ಲಿದ್ದೇವೆ. ಈ ಮೈತ್ರಿಯಲ್ಲಿ ಯಾವುದೇ ಗೊಂದಲಕ್ಕೆ ಅವಕಾಶ ಕೊಡಬಾರದು. ರಾಜ್ಯದಲ್ಲಿ ಉತ್ತಮ ಸರಕಾರ ತರಬೇಕೆನ್ನುವುದು ನಮ್ಮ ಉದ್ದೇಶ ಎಂದರು. ರಾಜ್ಯದಲ್ಲಿ ಈಗ ಆಡಳಿತ ಹೇಗೆ ನಡೆಯುತ್ತಿದೆ ಎಂದು ನಾನು ನಿರಂತರವಾಗಿ ಗಮನಿಸುತ್ತಿದ್ದೇನೆ. ಒಳ್ಳೆಯ ಸರಕಾರ ಬಂದು ಜನತೆ ನೆಮ್ಮದಿಯಿಂದ ಇರಬೇಕು ಎಂದಿದ್ದಾರೆ.

ಫನ್‌ತರಂಗ
- ರಘುಪತಿ ಶೃಂಗೇರಿ -

ಲಾಲ್‌ಬಾಗ್ ಮಾದರಿಯಲ್ಲಿ ಮತ್ತೆರಡು ಉದ್ಯಾನ ನಿರ್ಮಾಣಕ್ಕೆ ಸರ್ಕಾರ ಗ್ರೀನ್ ಸಿಗ್ನಲ್
ಸುದ್ದಿ

ಇಡಿ ಅಧಿಕಾರಿಗಳ ಮೇಲಿನ ಎಫ್‌ಐಆರ್ ರದ್ದತಿಗೆ ಆದೇಶ
ಜಾರಿ ನಿರ್ದೇಶನಾಲಯಕ್ಕೆ ಅಡ್ಡಿ: ಮಮತಾಗೆ ಛೀಮಾರಿ

ಬಂಗಾಳ ಸಿಎಂ ಮಮತಾಗೆ ಸುಪ್ರೀಮ್ ಮುಖಭಂಗ

ದೆಹಲಿ: ಪಶ್ಚಿಮ ಬಂಗಾಳದಲ್ಲಿನ ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಸರ್ಕಾರ ಮತ್ತು ಕೋಲ್ಕತಾ ಪೊಲೀಸರಿಗೆ ಭಾರೀ ಹಿನ್ನಡೆಯಾಗಿದೆ. ರಾಜಕೀಯ ಸಲಹಾ ಸಂಸ್ಥೆ ಐ-ಪ್ಯಾಕ್ ಕಚೇರಿ ಮೇಲೆ ದಾಳಿ ನಡೆಸಿದ್ದ ಇಡಿ (ಜಾರಿ ನಿರ್ದೇಶನಾಲಯ) ಅಧಿಕಾರಿಗಳ ವಿರುದ್ಧ ದಾಖಲಾಗಿರುವ ಎಫ್‌ಐಆರ್‌ಗಳನ್ನು ಸುಪ್ರೀಮ್ ಕೋರ್ಟ್ ವಜಾಗೊಳಿಸಿದೆ.

→ 4

ನ್ಯಾಯಪೀಠ ಹೇಳಿದ್ದೇನು?

- ಜ.9ರಂದು ಕೋಲ್ಕತಾ ಉಚ್ಚ ನ್ಯಾಯಾಲಯದಲ್ಲಿ ನಡೆದ ಬೆಳವಣಿಗೆಗಳು ಆಘಾತಕಾರಿಯಾಗಿವೆ
- ಈ ಬೆಳವಣಿಗೆಯಿಂದ ದೊಡ್ಡ ಪ್ರಶ್ನೆ ಹುಟ್ಟಿದೆ. ಹೀಗೆಯೇ ಬಿಟ್ಟರೆ ಅರಾಜಕತೆ ಸೃಷ್ಟಿಯಾಗುತ್ತದೆ.
- ಕೇಂದ್ರ ಸಂಸ್ಥೆಗಳಿಗೆ ಅಡ್ಡಿ ಸರಿಯಲ್ಲ.

ಚಿತ್ರ: ಸುಧಾಕರ್ ದೇವರಾಜ್

ಮಕರ ಸಂಕ್ರಾಂತಿ ಕಿಚ್ಚು

ಮಕರ ಸಂಕ್ರಾಂತಿ ಪ್ರಯುಕ್ತ ಗುರುವಾರ ಬೆಂಗಳೂರಿನ ಜ್ಞಾನಗಂಗಾ ನಗರದಲ್ಲಿ ಸಂಪ್ರದಾಯದಂತೆ ಕಿಚ್ಚು ಹಾಯಿಸುವ ಕಾರ್ಯಕ್ರಮ ನಡೆಯಿತು. ಎತ್ತುಗಳಿಗೆ ಅಲಂಕಾರ ಮಾಡಿ ಅವುಗಳೊಂದಿಗೆ ಜನರೂ ಉರಿಯುತ್ತಿರುವ ಬೆಂಕಿಯನ್ನು ಹಾದು ಓಡಿದ ರೋಚಕ ದೃಶ್ಯ ಇಲ್ಲಿದೆ.

ಕೆಪಿಸಿಸಿಯಿಂದ ಶಿಸ್ತುಕ್ರಮದ ಎಚ್ಚರಿಕೆ

ಮಹಿಳಾ ಅಧಿಕಾರಿಗೆ ಧಮ್ಕಿ: ರಾಜೀವ್ ಗೌಡಗೆ ನೋಟಿಸ್

ಬೆಂಗಳೂರು: ರಾಜ್ಯದಲ್ಲಿ ತೀವ್ರ ವಿವಾದಕ್ಕೆ ಕಾರಣವಾಗಿರುವ ಶಿಡ್ಲಘಟ್ಟ ಪೌರಾಯುಕ್ತೆ ಅಮೃತಾ ಗೌಡಗೆ ಧಮ್ಕಿ ಹಾಕಿದ್ದ ಕಾಂಗ್ರೆಸ್ ನಾಯಕ ರಾಜೀವ್ ಗೌಡಗೆ ಕೆಪಿಸಿಸಿ ಶೋಕಾಸ್ ನೋಟಿಸ್ ನೀಡಿದೆ. ಮಹಿಳಾ ಅಧಿಕಾರಿಗೆ ಬೆದರಿಕೆ ಹಾಕಿರುವ ಹಾಗೂ ಅಶ್ಲೀಲವಾಗಿ ಬೈದಿರುವ ಆಡಿಯೋ ತೀವ್ರ ವಿವಾದಕ್ಕೆ ಕಾರಣವಾಗಿರುವುದರಿಂದ, ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ. ಚಂದ್ರಶೇಖರ್ ನೋಟಿಸ್ ನೀಡಿದ್ದು, ಘಟನೆಯ ಸ್ಪಷ್ಟನೆ ನೀಡಲು ಸೂಚಿಸಿದ್ದಾರೆ.

→ 4

ಬುದ್ಧಿ ಹೇಳುವೆ: ಕೆಎಚ್

ಈ ವಿಷಯಕ್ಕೆ ಸಂಬಂಧಿಸಿ ಪ್ರತಿಕ್ರಿಯಿಸಿರುವ ಸಚಿವ ಮುನಿಯಪ್ಪ, ರಾಜೀವ್ ಗೌಡರನ್ನು ಕರೆದು ಬುದ್ಧಿ ಹೇಳುತ್ತೇನೆ. ರಾಜಕೀಯದಲ್ಲಿರುವವರು ಶಾಂತ ಸ್ವಭಾವದಿಂದ ಇರಬೇಕು. ಹೀಗೆಲ್ಲಾ ಮಾತನಾಡಬಾರದು. ರಾಜೀವ್ ಸೌಮ್ಯ ಸ್ವಭಾವದವರೇ. ಏಕೆ ಈ ರೀತಿ ಮಾತನಾಡಿದರು ಎಂದು ಗೊತ್ತಿಲ್ಲ ಎಂದು ಹೇಳಿದ್ದಾರೆ.

ಪೊಲೀಸ್ ಇಲಾಖೆ ಶಿಫಾರಸು ಜಾರಿಗೆ ಕೆಎಸ್‌ಸಿಎ ಶ್ರಮ
ಷರತ್ತುಬದ್ಧ ಅನುಮತಿ ನೀಡಲು ರಾಜ್ಯ ಸರಕಾರ ಸಜ್ಜು

ಚಿನ್ನಸ್ವಾಮಿಯಲ್ಲಿ ಮತ್ತೆ ಕ್ರಿಕೆಟ್?

ಬೆಂಗಳೂರು: ಬೆಂಗಳೂರಿನ ಚಿನ್ನಸ್ವಾಮಿ ಮೈದಾನದಲ್ಲಿ ಮತ್ತೆ ಕ್ರಿಕೆಟ್ ಪಂದ್ಯಗಳು ನಡೆಯುವುದು ಭಾಗಶಃ ಖಚಿತವಾಗಿದೆ. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ (ಕೆಎಸ್‌ಸಿಎ) ಪಂದ್ಯ ನಡೆಸಲು ಷರತ್ತುಗಳನ್ನು ವಿಧಿಸಿ ರಾಜ್ಯ ಪೊಲೀಸ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಹಾಗೂ ರಾಜ್ಯ ಸರಕಾರ ಒಪ್ಪಿಗೆ ನೀಡುವ ಸಾಧ್ಯತೆ ಇದೆ. ಕೆಎಸ್‌ಸಿಎ ರಾಜ್ಯ ಪೊಲೀಸ್ ಇಲಾಖೆ ಸೂಚಿಸಿದ ಹಲವು ಬದಲಾವಣೆಗಳನ್ನು ಈಗಾಗಲೇ ಮಾಡುತ್ತಿರುವುದರಿಂದ ಈ ಬೆಳವಣಿಗೆಯಾಗಿದೆ.

ಈ ಹಿನ್ನೆಲೆಯಲ್ಲಿ ಬುಧವಾರ ಕೆಎಸ್‌ಸಿಎನಲ್ಲಿ ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್ ಉನ್ನತ ಮಟ್ಟದ ಸಭೆಯನ್ನು ನಡೆಸಿದ್ದಾರೆ. ಕೇಂದ್ರ ವಿಭಾಗದ ಡಿಸಿಪಿ ಅಕ್ಷಯ್, ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಸೇರಿ ಹಲವರು ಸಭೆಯಲ್ಲಿ ಭಾಗಿಯಾಗಿದ್ದರು. ಕಾಲ್ತುಳಿತ ಪ್ರಕರಣ ನಂತರ ಕ್ರಿಕೆಟ್ ಪಂದ್ಯಗಳಿಗೆ ಅನುಮತಿ ನೀಡಲು ರಾಜ್ಯ

ಸರಕಾರ ಹಿಂದೇಟು ಹಾಕಿತ್ತು.

ಈ ಹಿನ್ನೆಲೆಯಲ್ಲಿ ಸಿಎಂ, ಡಿಸಿಎಂ ಹಾಗೂ ಗೃಹ ಸಚಿವ ಹಾಗೂ ನಗರ ಪೊಲೀಸ್ ಆಯುಕ್ತರನ್ನು ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಭೇಟಿಯಾಗಿದ್ದರು. ಪಂದ್ಯಗಳನ್ನು ನಡೆಸಲು ಅವಕಾಶ ಕೋರಿ ಸರಕಾರಕ್ಕೂ ಮನವಿ ಮಾಡಿದ್ದರು. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಏನೆಲ್ಲಾ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಷರತ್ತುಗಳನ್ನು ವಿಧಿಸಿ ಬೆಂಗಳೂರು ನಗರ ಪೊಲೀಸರು ಅನುಮತಿ ನೀಡಲಿದ್ದಾರೆ.

→ 4

ಲೋಪಗಳೇನು?

1. ಚಿನ್ನಸ್ವಾಮಿ ಮೈದಾನದ ಎಲ್ಲಾ ದ್ವಾರಗಳು ಬಹಳ ಚಿಕ್ಕದಾಗಿವೆ
2. ಅಗ್ನಿಶಾಮಕ ವಾಹನಗಳು, ಆ್ಯಂಬುಲೆನ್ಸ್ ಸಂಚಾರಕ್ಕೆ ಜಾಗ ಇಲ್ಲ
3. ಜನ ಬಂದರೆ ಅವರ ವಾಹನಗಳನ್ನು ನಿಲ್ಲಿಸಲು ಸೂಕ್ತ ವ್ಯವಸ್ಥೆ ಇಲ್ಲ
4. ಕ್ರಿಕೆಟ್ ತಂಡಗಳ ವಾಹನಗಳನ್ನು ನಿಲ್ಲಿಸಲೂ ಸಮರ್ಪಕ ಜಾಗವಿಲ್ಲ
5. ಕ್ರೀಡಾಂಗಣದ ಒಳಭಾಗದಲ್ಲಿರುವ ಕಟ್ಟಡಗಳು ವೈಜ್ಞಾನಿಕವಾಗಿಲ್ಲ
6. ಮೈದಾನದಲ್ಲಿ ಎಲ್ಲೂ ತುರ್ತು ನಿರ್ಗಮನ ವ್ಯವಸ್ಥೆಯನ್ನು ಮಾಡಿಲ್ಲ
7. ಸ್ಟೇಡಿಯಂ ಸುತ್ತಲೂ ನಿರ್ಮಾಣ ಆಗಿರುವ ತಡೆಗೋಡೆ ಅವೈಜ್ಞಾನಿಕ

ಕೃಷ್ಣಾ ಮೇಲ್ದಂಡೆಗೆ 18000, ವಿಬಿ ರಾಮ್ ಜಿಗೆ ಹೆಚ್ಚುವರಿ 3000 ಕೋಟಿ ರು. ಎತ್ತಿಡಬೇಕು
ಜಿಎಸ್‌ಟಿ ಇಳಿಕೆಯಿಂದ 9000 ಕೋಟಿ ರು. ನಷ್ಟ | ಹಣ ಹೊಂದಿಸುವುದೇ ಸರಕಾರಕ್ಕೆ ಸವಾಲು

ರಾಜ್ಯ ಬಜೆಟ್‌ಗೆ 21000 ಕೋಟಿ ರು. ಹೊರೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿರುವ ಗೊಂದಲದ ನಡುವೆ 17ನೇ ಬಜೆಟ್ ಮಂಡಿಸಲು ಸಜ್ಜಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಬಾರಿ ಗ್ಯಾರಂಟಿ ಭಾರದೊಂದಿಗೆ, ಹೆಚ್ಚುವರಿ ಹೊರೆ ಬೀಳುವ ಆತಂಕವಿದೆ. ಪ್ರಮುಖವಾಗಿ ಕೇಂದ್ರ ಸರಕಾರದ ಎರಡು ತೀರ್ಮಾನಗಳು ರಾಜ್ಯ ಸರಕಾರದ ಬಜೆಟ್ ಮೇಲೆ ತೀವ್ರ ಪರಿಣಾಮ ಬೀಳುವ ಸಾಧ್ಯತೆಯಿದೆ. ಮೊದಲಿಗೆ ಜಿಎಸ್‌ಟಿ ತೆರಿಗೆಯಿಳಿಕೆಯಿಂದ ರಾಜ್ಯ ಸರಕಾರದ ಬೊಕ್ಕಸಕ್ಕೆ ಆಗುತ್ತಿರುವ ಒಂಬತ್ತು ಸಾವಿರ ಕೋಟಿ ರು. ನಷ್ಟ ಹಾಗೂ ಮನರೇಗಾ ಬದಲಿಗೆ ಜಾರಿಗೊಳಿಸಿರುವ ವಿಬಿ ರಾಮ್ ಜಿ ಕಾಯಿದೆಯಿಂದ ರಾಜ್ಯದ ಬೊಕ್ಕಸದ ಮೇಲೆ ಹೆಚ್ಚುವರಿ ಮೂರು ಸಾವಿರ ಕೋಟಿ ರು. ಹೊರೆ ಬೀಳಲಿದೆ. ಇದರೊಂದಿಗೆ ರಾಜ್ಯ ಸರಕಾರ ನೀಡಿರುವ 'ಭರವಸೆ'ಯಾಗಿರುವ ಕೃಷ್ಣ ಮೇಲ್ದಂಡೆ ಯೋಜನೆಯ ಭೂಸ್ವಾಧೀನಕ್ಕೆ ಅಗತ್ಯವಿರುವ 18 ಸಾವಿರ ಕೋಟಿ ರು.ಗಳನ್ನು ಯಾವ ರೀತಿ ಹೊಂದಿಸಲಿದ್ದಾರೆ ಎನ್ನುವ ಕುತೂಹಲ

ಅನೇಕರಲ್ಲಿದೆ. ಈ ಮೂರು ಸೇರಿಕೊಂಡರೆ, ರಾಜ್ಯ ಸರಕಾರ ಹೆಚ್ಚುವರಿಯಾಗಿ ಒಟ್ಟು 21 ಸಾವಿರ ಕೋಟಿ ರು. ಕ್ರೋಢೀಕರಿಸಬೇಕಿದೆ.

ಕೃಷ್ಣಾ ಮೇಲ್ದಂಡೆ ಮೂರನೇ ಹಂತಕ್ಕೆ ಅಗತ್ಯವಿರುವ ಭೂಸ್ವಾಧೀನದ ಪರಿಹಾರ ಹಾಗೂ ಪುನರ್ ನಿರ್ಮಾಣ, ವಸತಿ ಕಾರ್ಯಗಳಿಗೆ ಮುಂದಿನ ನಾಲ್ಕು ವರ್ಷದಲ್ಲಿ ಅಗತ್ಯವಿರುವ 78 ಸಾವಿರ ಕೋಟಿ ರು. ನೀಡಲು ಸೆಪ್ಟೆಂಬರ್‌ನಲ್ಲಿ ನಡೆದಿದ್ದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಮುಳುಗಡೆ ಜಮೀನುಗಳ ಭೂಸ್ವಾಧೀನಕ್ಕಾಗಿ ಒಣ ಭೂಮಿಗೆ ಪ್ರತಿ ಎಕರೆಗೆ 30 ಲಕ್ಷ ರು., ನೀರಾವರಿ ಜಮೀನಿಗೆ ಎಕರೆಗೆ 40 ಲಕ್ಷ ರು. ನಿಗದಿ ಮಾಡಲಾಗಿದ್ದು, ಕಾಲುವೆ ನಿರ್ಮಾಣಕ್ಕೆ ಸ್ವಾಧೀನಪಡಿಸಿಕೊಳ್ಳುವ ಒಣ 25 ಲಕ್ಷ ರು. ಹಾಗೂ ನೀರಾವರಿ ಭೂಮಿಗೆ 30 ಲಕ್ಷ ರು. ನಿಗದಿ ಮಾಡಲಾಗಿದೆ.

ಯೋಜನೆಯಲ್ಲಿ ಭೂಸ್ವಾಧೀನ ಮತ್ತು ಪುನರ್ ವಸತಿ ಹಾಗೂ ಪುನರ್‌ನಿರ್ಮಾಣಕ್ಕೆ ಹೆಚ್ಚುವರಿ ಸುಮಾರು 78,000 ಕೋಟಿ ರು. ಮೊತ್ತವನ್ನು ಮುಂದಿನ 4 ವರ್ಷಗಳಲ್ಲಿ ಭರಿಸಲು ಸುಮಾರು 18,000 ಕೋಟಿ ವಾರ್ಷಿಕ ಅನುದಾನವನ್ನು ಜಲಸಂಪನ್ಮೂಲ ಇಲಾಖೆಗೆ ಆಯವ್ಯಯದಲ್ಲಿ ಕಲ್ಪಿಸಲು ತೀರ್ಮಾನಿಸ ಲಾಗಿತ್ತು. ಈ ಯೋಜನೆಗೆ ಈ ಪ್ರಮಾಣದ ಅನುದಾನ ಮೀಸಲಿಟ್ಟರೆ, ಇನ್ನುಳಿದ ನೀರಾವರಿ ಯೋಜನೆಗಳ ಅನುದಾನವನ್ನು ಹೊಂದಿಸುವುದು ಹೇಗೆ ಎನ್ನುವುದು ಅನೇಕರ ಪ್ರಶ್ನೆಯಾಗಿದೆ. ಈ ಪ್ರಮಾಣದ ಅನುದಾನ ಒದಗಿಸಲು ಹೆಚ್ಚುವರಿ ಸಾಲ ಅಥವಾ ಇಲಾಖಾವಾರು ಅನು ದಾನ ಕಡಿತಗೊಳಿಸಬೇಕಿದೆ. ಆರ್ಥಿಕ ಇಲಾಖೆ ಅಧಿಕಾರಿಗಳು, ಜಲಸಂಪನ್ಮೂಲ ಇಲಾಖೆಯ ಒಟ್ಟು ಹಂಚಿಕೆಯನ್ನು ಕಡಿತ ಮಾಡಿ ಅದನ್ನು ಭೂಪರಿಹಾರಕ್ಕಾಗಿ ಬಳಸುವುದು ಸೂಕ್ತವೆಂದು ಸಲಹೆ ನೀಡಿದೆ. ಆದರೆ ಈ ರೀತಿ ಮಾಡುವುದರಿಂದ ಈ ಪ್ರಮಾಣದಲ್ಲಿ ಅನುದಾನ ಒಗ್ಗೂಡಿಸಲು ಸಾಧ್ಯವೇ ಎನ್ನುವ ಪ್ರಶ್ನೆಯಿದೆ.

→ 4

ರಾಮ್ ಜಿಯನ್ನು ಒಪ್ಪದಿದ್ದರೂ ಅನುದಾನ ನೀಡಲೇಬೇಕು!

ಮನರೇಗಾ ಬದಲಿಗೆ ಕೇಂದ್ರ ಸರಕಾರ ಜಾರಿಗೊಳಿಸಿರುವ ವಿಬಿ ರಾಮ್ ಜಿ ಯೋಜನೆಯಿಂದ ರಾಜ್ಯ ಸರಕಾರಗಳಿಗೆ ಹೆಚ್ಚುವರಿ ಅನುದಾನ ಅಗತ್ಯ. ಕಾಂಗ್ರೆಸ್ ನಾಯಕರು, ಈ ಯೋಜನೆಯನ್ನು ಒಪ್ಪಿಕೊಳ್ಳುವುದಿಲ್ಲ ಎನ್ನುತ್ತಿದ್ದರೂ, ಕಾನೂನಾತ್ಮಕವಾಗಿ ಕಾಯಿದೆಯನ್ನು ಹಿಂಪಡೆಯದ ಹೊರತು ಈ ಯೋಜನೆಗೆ ಅನುದಾನ ನೀಡದೇ ಇರಲು ಸಾಧ್ಯವಿಲ್ಲ. ಈ ಹಿಂದೆ ಕೇಂದ್ರ ಹಾಗೂ ರಾಜ್ಯ ಶೇ.90:10 ಅನುಪಾತದಲ್ಲಿ ಅನುದಾನ ನೀಡಬೇಕಿತ್ತು. ಆದರೀಗ 60:40 ಅನುಪಾತದಲ್ಲಿ ನೀಡಲಾಗಿದೆ. ಆದ್ದರಿಂದ ಹೊಸ ಕಾಯಿದೆಯಂತೆ ಹೆಚ್ಚುವರಿ 3,000-4,000 ಕೋಟಿ ಹೊರೆ ಬೀಳಲಿದೆ ಎಂದು ಸಿಎಂ ಸಿದ್ದರಾಮಯ್ಯ ಈಗಾಗಲೇ ಆತಂಕ ವ್ಯಕ್ತಪಡಿಸಿದ್ದಾರೆ. ಆದ್ದರಿಂದ ಈ ಮೂರು ಸಾವಿರ ಕೋಟಿ ರು. ಅನುದಾನ ಹೊಂದಿಸುವುದು ಸವಾಲಿನ ಕೆಲಸ ಎನ್ನಲಾಗುತ್ತಿದೆ.

ಸಮಾಚಾರ ಸಣ್ಣದಲ್ಲ

ಜೀವ ವಿಮೆ ಖಾತ್ರಿ ಉಳಿತಾಯ ಯೋಜನೆ

ಬೆಂಗಳೂರು: ಜೀವ ವಿಮೆ ಕಂಪನಿಗಳಲ್ಲಿ ಒಂದಾಗಿರುವ ಎಸ್‌ಬಿಐ ಜೀವ ವಿಮಾ ನಿಗಮ ಜೀವ ವಿಮೆ ರಕ್ಷಣೆ ಜತೆಗೆ ದೀರ್ಘಾವಧಿಯ ಖಾತರಿದಾಯಕ ಪ್ರಯೋಜನ ನೀಡಲು ಮುಂದಾಗಿದೆ. ಜೀವ ವಿಮೆಯ ಉಳಿತಾಯ ಉತ್ಪನ್ನವಾಗಿರುವ ಎಸ್‌ಬಿಐ ಲೈಫ್-ಸ್ಮಾರ್ಟ್ ಪ್ಲಾಟಿನಾ ಅಡ್ವಾಂಟೇಜ್ ಪ್ರಾರಂಭಿಸಿದೆ. ಮಕ್ಕಳ ಶಿಕ್ಷಣ, ನಿವೃತ್ತಿ ಯೋಜನೆ, ಎರಡನೇ ಆದಾಯ ಮೂಲ ಸೃಷ್ಟಿ ಸೇರಿದಂತೆ ಬದುಕಿನ ವಿವಿಧ ಘಟ್ಟಗಳಲ್ಲಿ ಎದುರಾಗುವ ಹಣಕಾಸಿನ ಅಗತ್ಯಗಳನ್ನು ಆತ್ಮವಿಶ್ವಾಸದಿಂದ ಈಡೇರಿಸಿಕೊಳ್ಳಬಹುದಾಗಿದೆ. ಈ ಪಾಲಿಸಿ ವರ್ಷದಲ್ಲಿ ಖಚಿತವಾದ ಖಾತರಿಯ ಸೇರ್ಪಡೆಗಳೊಂದಿಗೆ ಹಣಕಾಸು ನಿಧಿಯನ್ನು ಸಂಗ್ರಹಿಸಲು ಅನುವು ಮಾಡಿಕೊಡಲಿದೆ. ಸೀಮಿತ ಅವಧಿಗೆ ಪ್ರೀಮಿಯಂ ಪಾವತಿಸುವ ಸೌಲಭ್ಯದ ಜತೆಗೆ ಪಾಲಿಸಿಯ ಪರಿಪಕ್ವತೆಯ ಸಂದರ್ಭದಲ್ಲಿ ನಿರೀಕ್ಷಿತ ಫಲಿತಾಂಶ ಪಡೆಯುವುದನ್ನು ಖಚಿತಪಡಿಸಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕಚೇರಿ ಸ್ಥಳಾಂತರ

ಬೆಂಗಳೂರು: ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಬೊಮ್ಮನಹಳ್ಳಿ ವಲಯದ ಉಪ ನಿರ್ದೇಶಕರ ಕಚೇರಿಯನ್ನು ಸಾರ್ವಜನಿಕರ ಭೇಟಿಗೆ ಅನುಕೂಲವಾಗುವಂತೆ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಸಮೀಪದಲ್ಲಿರುವಂತಹ ಬಿಟಿಎಂ ಲೇಔಟ್‌ನ ದೇವರಚಿಕ್ಕನಹಳ್ಳಿ ಆರ್‌ಟಿಒ ಕಚೇರಿ ಎದುರಿಗೆ ತಾತ್ಕಾಲಿಕವಾಗಿ ಸ್ಥಳಾಂತರಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

ಚಿತ್ರಹಿಂಸೆ ನೀಡಿ ನಾಯಿ ಮರಿ ಕೊಂದ ಕಿರಾತಕ

ಬೆಂಗಳೂರು: ಜೆ.ಪಿ.ನಗರದಲ್ಲಿ ಕಳೆದ ವಾರ ನಾಯಿಮರಿಯ ಮನಸೋಯಿಚ್ಛೆ ಥಳಿಸಿರುವ ಘಟನೆಯೊಂದು ನಡೆದಿದೆ. ಈ ಬಗ್ಗೆ ಸಿಸಿಟಿವಿ ವಿಡಿಯೊವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಈ ಕೃತ್ಯವನ್ನು ಮಾಡಿರುವ ವ್ಯಕ್ತಿಯನ್ನು ನೇಪಾಳ ಕಿರಣ್ ಎಂದು ಹೇಳಲಾಗಿದೆ. ಜೆ.ಪಿ. ನಗರದ ರೆಸ್ಟೋರೆಂಟ್‌ನಲ್ಲಿ ಸೆಕ್ಯುರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ, ಈತ ತನ್ನ ಸಹೋದರನ ಬಾಡಿಗೆ ಮನೆಯಲ್ಲಿ ವಾಸವಾಗಿದ್ದ. ಜನವರಿ 9 ರಂದು ಸ್ಥಳೀಯ ನಾಯಿಗಳಿಗೆ ಆಹಾರ ನೀಡುವ ವ್ಯಕ್ತಿಯೊಬ್ಬರು ವಾಟ್ಸ್ ಆ್ಯಪ್ ಗುಂಪಿನಲ್ಲಿ ವಿಡಿಯೊಗಳನ್ನು ಹಂಚಿಕೊಂಡ ನಂತರ ಈ ಘಟನೆ ಬೆಳಕಿಗೆ ಬಂದಿದೆ. ಪ್ರತಿದಿನ 8 ನಾಯಿಮರಿಗಳಿಗೆ ಆಹಾರ ನೀಡುವ ವ್ಯಕ್ತಿಯೇ ಈ ನಾಯಿಮರಿಗೂ ಆಹಾರ ನೀಡಿದ್ದರು ಎಂದು ಪ್ರಾಣಿ ಕಲ್ಯಾಣ ಸ್ವಯಂಸೇವಕರು ತಿಳಿಸಿದ್ದಾರೆ. ನಾಯಿ ಮರಿಗಳಿಗೆ ಆಹಾರ ಹಾಕುವ ವೇಳೆ ಈ ನಾಯಿ ಮರಿ ದೇಹ ಪತ್ತೆಯಾಗಿದೆ. ಇದರಲ್ಲಿ ಉಳಿದ ನಾಯಿಮರಿಗಳು ಕಾಣೆಯಾಗಿವೆ ಎಂದು ಹೇಳಿದ್ದಾರೆ.

ಎಐ ಕ್ಯಾಮೆರಾ ಕಣ್ಣು ತಪ್ಪಿಸುವ ನಂಬರ್ ಪ್ಲೇಟ್

ಬೆಂಗಳೂರು: ಸಂಚಾರ ನಿಯಂತ್ರಣ ಮತ್ತು ಕಾನೂನು ಜಾರಿಗೆ ನಿಗಾ ಕ್ಯಾಮೆರಾಗಳ ಅವಲಂಬನೆ ಹೆಚ್ಚುತ್ತಿರುವ ನಡುವೆಯೇ ದೋಷವಿರುವ ಹಾಗೂ ಫ್ಯಾನ್ಸಿ ನಂಬರ್ ಪ್ಲೇಟ್‌ಗಳು ಬೆಂಗಳೂರು ಸಂಚಾರ ಪೊಲೀಸರಿಗೆ ದೊಡ್ಡ ಸವಾಲಾಗಿ ಪರಿಣಮಿಸಿವೆ. ಇಂತಹ ನಂಬರ್ ಪ್ಲೇಟ್‌ಗಳನ್ನು ಆಟೋಮ್ಯಾಟಿಕ್ ನಂಬರ್ ಪ್ಲೇಟ್ ರೆಕಗ್ನಿಶನ್ ಕ್ಯಾಮೆರಾಗಳು ಪತ್ತೆ ಹಚ್ಚಲು ವಿಫಲವಾಗುತ್ತಿದ್ದು, ಇದರಿಂದ ಕಾನೂನು ಜಾರಿ ಹಾಗೂ ಅಪರಾಧ ತನಿಖೆಗೆ ಅಡ್ಡಿಯಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ಡಿಫೆಕ್ಟಿವ್ ನಂಬರ್ ಪ್ಲೇಟ್‌ಗಳಿಗೆ ಸಂಬಂಧಿಸಿದಂತೆ 4.2 ಲಕ್ಷಕ್ಕೂ ಹೆಚ್ಚು ಪ್ರಕರಣಗಳನ್ನು ದಾಖಲಿಸಲಾಗಿದೆ. 2023ರಲ್ಲಿ 1,50,861 ಪ್ರಕರಣಗಳು, 2024ರಲ್ಲಿ 1,57,665 ಪ್ರಕರಣಗಳು ಹಾಗೂ 2025ರಲ್ಲಿ ನವೆಂಬರ್‌ವರೆಗೆ 1,50,861 ಪ್ರಕರಣಗಳು ದಾಖಲಾಗಿವೆ. ಮಂದವಾದ, ಮುರಿದ ಅಥವಾ ಟೇಪ್, ಕಾಗದದಿಂದ ಮುಚ್ಚಿದ ನಂಬರ್ ಪ್ಲೇಟ್‌ಗಳು ಕ್ಯಾಮೆರಾ ಕಣ್ಣಿಗೆ ಬೀಳದ ಕಾರಣ ಅತಿವೇಗ, ಸಿಗ್ನಲ್ ಜಂಪ್ ಮುಂತಾದ ಅಪರಾಧಗಳಿಗೆ ಇ-ಚಲನ್ ಗೆ ಒಳಗಾಗುವುದಿಲ್ಲ. ಹಿಟ್ ಅಂಡ್ ರನ್ ಪ್ರಕರಣಗಳು ಹಾಗೂ ವಾಹನ ಬಳಸಿ ದರೋಡೆ ಮಾಡಿದ ಪ್ರಕರಣಗಳ ತನಿಖೆಯೂ ಇದರಿಂದ ವಿಳಂಬವಾಗುತ್ತಿದೆ ಎಂದು ಹಿರಿಯ ಸಂಚಾರ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಾನ್ಯ ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಧೀಶರ ನ್ಯಾಯಾಲಯ, ಕನಕಪುರ.
ಸಿ.ಮಿಸ್ ನಂ. 723/2025.
1. ಶ್ರೀಮತಿ ಮಾದಮ್ಮ, ಕೋಂ. ಲೇಟ್ ಮಾದೇಗೌಡ @ ಕರಿಗೌಡ ವಯಸ್ಸು 75 ವರ್ಷಗಳು. ಎಂ.ಮಣಿಯಂಬಾಳ್ ಗ್ರಾಮ, ಗುತ್ತಲಹುಣಸೇ ಗ್ರಾಮ, ಮರಳವಾಡಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ. & ಇತರರು
....ಅರ್ಜಿದಾರರು
: ವಿರುದ್ಧ :
1. ತಹಶೀಲ್ದಾರ್‌ರವರು, ಮತ್ತು ಜನನ ಮತ್ತು ಮರಣ ನೊಂದಣಾಧಿಕಾರಿಗಳು, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಟೌನ್.
2. ಗ್ರಾಮಲೆಕ್ಕಾಧಿಕಾರಿಗಳು, ಎಂ.ಮಣಿಯಂಬಾಳ್ ವೃತ್ತ, ಮರಳವಾಡಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ
....ಎದುರುದಾರರು
ಪತ್ರಿಕಾ ಪ್ರಕಟಣೆ ಮೂಲಕ ತಿಳುವಳಿಕೆ ಪತ್ರ.
ಅರ್ಜಿದಾರರು, ಕನಕಪುರ ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ 1ನೇ ಅರ್ಜಿದಾರರ ಗಂಡನಾದ 2 ರಿಂದ 4ನೇ ಅರ್ಜಿದಾರರ ತಂದೆಯಾದ ಶ್ರೀ. ಮಾದೇಗೌಡ @ ಕರಿಗೌಡ ರವರು ದಿನಾಂಕ. 31-08-1973 ರಂದು ಬೆಂಗಳೂರು ದಕ್ಷಿಣ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಮರಳವಾಡಿ ಹೋಬಳಿ, ಎಂ.ಮಣಿಯಂಬಾಳ್ ಗ್ರಾಮದಲ್ಲಿ ಮರಣ ಹೊಂದಿದ್ದು, ಎದುರುದಾರರ ಕಛೇರಿಯಲ್ಲಿ ಮರಣ ನೊಂದಣೆ ಆಗದ ಕಾರಣ ಸದರಿ ಮರಣ ಪ್ರಮಾಣಪತ್ರ ಕೋರಿ ಈ ಘನ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದು, ಈ ಸಂಬಂಧ ಘನನ್ಯಾಯಾಲಯವು ಸಾರ್ವಜನಿಕವಾಗಿ ಪತ್ರಿಕಾ ಪ್ರಕಟನೆ ನೀಡಲು ಆದೇಶಿಸಿದ್ದು, ಮೇಲ್ಕಂಡ ಶ್ರೀ. ಮಾದೇಗೌಡ @ ಕರಿಗೌಡ ರವರ ಮರಣ ಸಂಬಂಧ ಸಾರ್ವಜನಿಕವಾಗಿ ಯಾರಾದರೂ ತಮ್ಮ ತಕರಾರು ಮತ್ತು ಆಕ್ಷೇಪಣೆ ಇದ್ದರೆ, ಈ ಪ್ರಕರಣವು ದಿನಾಂಕ 25-02-2026 ರಂದು ಈ ನ್ಯಾಯಾಲಯವು ವಿಚಾರಣೆಗಾಗಿ ಗೊತ್ತುಪಡಿಸಿದ್ದು, ಆದ ಕಾರಣ ಸದರಿ ದಿನಾಂಕದಂದು ಬೆಳಿಗ್ಗೆ 11 ಗಂಟೆಗೆ ಸರಿಯಾಗಿ ಈ ನ್ಯಾಯಾಲಯದ ಮುಂದೆ ಖುದ್ದಾಗಿ ಅಥವಾ ತಮ್ಮ ವಕೀಲರ ಮೂಲಕ ಹಾಜರಾಗಿ ತಮ್ಮ ತಕರಾರು/ ಆಕ್ಷೇಪಣೆ ಸಲ್ಲಿಸಲು ತಿಳಿಯಪಡಿಸಿದೆ. ತಪ್ಪಿದ್ದಲ್ಲಿ ಪ್ರಕರಣವನ್ನು ಯಾವುದೇ ತಕರಾರು ಇಲ್ಲವೆಂದೂ ಪರಿಗಣಿಸಿ ಲಭ್ಯವಿರುವ ದಾಖಲಾತಿಗಳ ಮೇಲೆ ತೀರ್ಮಾನ ಮಾಡಲಾಗುವುದು ಎಂದೂ ತಿಳಿಯುವುದು. ಈ ದಿನ ಅಂದರೆ 12ನೇ/ಜನವರಿ/2026 ರಂದು ನ್ಯಾಯಾಲಯದ ಆದೇಶ ಮತ್ತು ಮೋಹರಿನೊಂದಿಗೆ ನೀಡಲಾಗಿದೆ.
ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು.
ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಕನಕಪುರ.
ಅರ್ಜಿದಾರರ ಪರ ವಕೀಲರು
ಎಸ್.ವಿ.ವೀರಪ್ಪ, ಕನಕಪುರ
ದಿನಾಂಕ: 12-01-2026

ವಿಕಲಚೇತನರ ಜತೆ ಸಂಕ್ರಾಂತಿ ಆಚರಿಸಿದ ಎಚ್ಡಿ ಕುಮಾರಸ್ವಾಮಿ

ನೀವು ವಿಕಲಚೇತರಲ್ಲ, ಸಮಾಜಕ್ಕೆ ಮಾದರಿ ಎಂದ ಕೇಂದ್ರ ಸಚಿವರು

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಬಿಡದಿಯ ತೋಟದ ಮನೆಯಲ್ಲಿ ಬೆಸ್ಕಾಂ ಸೇರಿದಂತೆ ಕೆಪಿಟಿಸಿಎಲ್‌ನ ವಿವಿಧ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 600ಕ್ಕೂ ಹೆಚ್ಚು ವಿಕಲಚೇತನ ಉದ್ಯೋಗಿಗಳೊಂದಿಗೆ ಸಂಕ್ರಾಂತಿ ಆಚರಿಸಿದರು.

ಬೆಂಗಳೂರು: ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಬಿಡದಿಯ ತೋಟದ ಮನೆಯಲ್ಲಿ ಬೆಸ್ಕಾಂ ಸೇರಿದಂತೆ ಕೆಪಿಟಿಸಿಎಲ್‌ನ ವಿವಿಧ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 600ಕ್ಕೂ ಹೆಚ್ಚು ವಿಕಲಚೇತನ ಉದ್ಯೋಗಿಗಳೊಂದಿಗೆ ಸಂಕ್ರಾಂತಿ ಆಚರಿಸಿದರು.

ಕಳೆದ ಏಳು ವರ್ಷಗಳಿಂದ ತಮ್ಮಲ್ಲಿಗೆ ಬಂದು ಸಂಕ್ರಾಂತಿ ಆಚರಿಸುತ್ತಿರುವ ಎಲ್ಲ ವಿಕಲಚೇತನ ಕುಟುಂಬ ಸದಸ್ಯರನ್ನು ಭೇಟಿಯಾದ ಎಚ್‌ಡಿಕೆ, ಅವರೊಂದಿಗೆ ಹಬ್ಬವನ್ನು ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಅಷ್ಟು ಕುಟುಂಬಗಳನ್ನು ಕಂಡು ತೀವ್ರ ಭಾವುಕರಾದ ಸಚಿವರು, ವಿಶೇಷವಾಗಿ ಮಕ್ಕಳ ಜತೆ ಬಹಳ ಸಮಯ ಕಳೆದರು. ನಿಮ್ಮನ್ನು ನೋಡುತ್ತಿದ್ದರೆ ನನ್ನ ಹೃದಯ ತುಂಬಿ ಬರುತ್ತಿದೆ. ದೇವರು ಕೊಟ್ಟ ಸಣ್ಣ ಅವಕಾಶದಲ್ಲಿ ನಿಮಗೆ ಸಹಾಯ ಮಾಡುವ ಅವಕಾಶ ಸಿಕ್ಕಿತು. ಅದನ್ನೇ ನೀವೆಲ್ಲರೂ ಹೃದಯದಲ್ಲಿ ಇಟ್ಟುಕೊಂಡು ನನ್ನ ಮೇಲೆ ಪ್ರೀತಿ, ವಾತ್ಸಲ್ಯ ತೋರುತ್ತಿರುವುದು ನನ್ನ ಜೀವನಕ್ಕೆ ಸಾರ್ಥಕತೆ ತಂದಿದೆ. ಅವಕಾಶ ಸಿಕ್ಕಿದಾಗ ನನ್ನ ಕೈಲಾದಷ್ಟು ಸಹಾಯ ಮಾಡಿದ್ದೇನೆ. ವಿಕಲಚೇತನರಿಗೆ ಸಾಧ್ಯವಾದಷ್ಟು ನೆರವು ಕೊಟ್ಟಿದ್ದೇನೆ. ಮುಂದೆಯೂ ದೈಹಿಕವಾಗಿ ಶಕ್ತಿ ಇಲ್ಲದ ಯಾರೇ ಇದ್ದರೂ ಅವರಿಗಾಗಿ ನನ್ನ ಹೃದಯ ಮಿಡಿಯುತ್ತದೆ. ಪ್ರಾಮಾಣಿಕವಾಗಿ ಅಂತಹವರ ಒಳಿತಿಗಾಗಿ ಪ್ರಯತ್ನ ಮಾಡುತ್ತೇನೆ. ವಿಕಲಚೇತನರು, ದೈಹಿಕವಾಗಿ ಅಶಕ್ತರ ಬಗ್ಗೆ ನಮಗೆ ಅನುಕಂಪಕ್ಕಿಂತ ಮಿಗಿಲಾಗಿ ಅವರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಕೆಲಸ ಆಗಬೇಕಿದೆ. ನನಗೆ ಅವಕಾಶ ಸಿಕ್ಕಿದಾಗ ನಾನು ಇಂಥವರ ಪರವಾಗಿ ಕೆಲಸ ಮಾಡುತ್ತೇನೆ. ನನ್ನ ಪಾಲಿಗೆ ಇವರು ದೇವರ ಸಮಾನರು ಎಂದರು.

ಹಿನ್ನೆಲೆ ಏನು?

2006ರಲ್ಲಿ ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ ಜನತಾದರ್ಶನ ನಡೆಯುತ್ತಿತ್ತು. ಈ ಸಂದರ್ಭದಲ್ಲಿ ಅಪಾರ ಪ್ರಮಾಣದ ವಿಕಲಚೇತನರು ಉದ್ಯೋಗ ಅರಸಿ ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಲು ಬರುತ್ತಿದ್ದರು. ವಿಕಲಚೇತನರ ಬವಣೆಯನ್ನು ಕಣ್ಣಾರೆ ಕಂಡ ಅಂದಿನ ಸಿಎಂ ಕುಮಾರಸ್ವಾಮಿ ಅವರು, ಬೆಸ್ಕಾಂ ಸೇರಿ ಕೆಪಿಟಿಸಿಎಲ್‌ನ ವಿವಿಧ ವಿಭಾಗಗಳಲ್ಲಿ ಗುತ್ತಿಗೆ ಆಧಾರದ ಮೇಲೆ 600ಕ್ಕೂ ಹೆಚ್ಚು ವಿಕಲಚೇತನರನ್ನು ನೇಮಕ ಮಾಡಿದರು. ಅದಾದ ನಂತರ 2018ರವರೆಗೂ ಇಷ್ಟು ಉದ್ಯೋಗಿಗಳ ಸೇವೆ ಕಾಯಂ ಆಗಲಿಲ್ಲ. ಅದುವರೆಗೂ ಯಾವುದೇ ಸರಕಾರ ಈ ವಿಕಲಚೇತನರ ಕಷ್ಟಕ್ಕೆ ಸ್ಪಂದಿಸಿರಲಿಲ್ಲ. 2018ರಲ್ಲಿ ಮತ್ತೆ ಸಿಎಂ ಆಗಿಬಂದ ಕುಮಾರಸ್ವಾಮಿ ಅವರು, 2006ರಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲ್ಪಟ್ಟ ಎಲ್ಲ ವಿಕಲಚೇತನ ಉದ್ಯೋಗಿಗಳ ನೇಮಕಾತಿ ಕಾಯಂ ಮಾಡಿದರು. ಎಸ್‌ಎಸ್‌ಎಲ್‌ಸಿ ಪಾಸಾಗಿದ್ದ 300, ಪದವಿ ಉತ್ತೀರ್ಣರಾಗಿದ್ದ 300 ವಿಕಲಚೇತನ ಅಭ್ಯರ್ಥಿಗಳಿಗೆ ಇಂಧನ ಇಲಾಖೆಯಲ್ಲಿ ಉದ್ಯೋಗವಕಾಶ ಕಲ್ಪಿಸಿದ್ದರು. 2019 ಜನವರಿ 14ರಂದು ಸಂಕ್ರಾಂತಿ ಹಬ್ಬದ ದಿನವೇ ಎಚ್‌ಡಿಕೆ ಅವರು ಸೇವೆ ಕಾಯಂ ಮಾಡಿದ ಆದೇಶ ಹೊರಡಿಸಿದರು.

ಅರ್ಧಕ್ಕೆ ಕಾಲೇಜು ಬಿಟ್ಟು ತಾಯಿ ಜತೆ ಆನ್‌ಲೈನ್ ವಂಚನೆಗಿಳಿದ ಯುವಕ

ಬೆಂಗಳೂರು: ಬೆಂಗಳೂರಿನಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿದೆ. ಜನರನ್ನು ತಮ್ಮ ಮೋಸದ ಬಲೆಗೆ ಬೀಳಿಸಿಕೊಂಡು ಕೋಟಿ ಕೋಟಿ ಹಣ ದೋಚುತ್ತಿದ್ದಾರೆ. ಇಂತಹ ಕೃತ್ಯದಲ್ಲಿ ಯುವಕರೇ ಹೆಚ್ಚು ಭಾಗಿಯಾಗುತ್ತಿದ್ದಾರೆ. ಅದರಲ್ಲೂ ಕಾಲೇಜು ಅರ್ಧದಲ್ಲಿ ಬಿಟ್ಟು, ಇಂತಹ ಕೃತ್ಯದಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ. ಇದೀಗ ವೇಗವಾಗಿ ಹಣ ಸಂಪಾದಿಸುವ ಭರದಲ್ಲಿ 22 ವರ್ಷದ ಯುವಕ ಪೊಲೀಸರ ಅತಿಥಿಯಾಗಿದ್ದಾನೆ.

ಪೊಲೀಸರು ನಡೆಸಿದ ಬೃಹತ್ ಸೈಬರ್ ಅಪರಾಧ ಕಾರ್ಯಾಚರಣೆ ವೇಳೆ ಈ ಘಟನೆ ಬೆಳಕಿಗೆ ಬಂದಿದೆ. ಆನ್‌ಲೈನ್ ವಂಚನೆಗಳ ಮೂಲಕ ಕದ್ದ ಹಣವನ್ನು ಸ್ಥಳಾಂತರಿಸಲು ಬಳಸುತ್ತಿದ್ದ ಸಾವಿರಾರು ಬ್ಯಾಂಕ್ ಖಾತೆಗಳನ್ನು ನಿರ್ವಹಿಸುತ್ತಿದ್ದ ಆರೋಪದ ಮೇಲೆ ಬೆಂಗಳೂರು ಪೊಲೀಸರು ಮೊಹಮ್ಮದ್ ಉಜೈಫ್ ಮತ್ತು ಅವನ ತಾಯಿ ಸಬಾನಾ ಅಬ್ದುಲ್ ಬಾರಿಯನ್ನು ಬಂಧಿಸಿದ್ದಾರೆ.

ತನಿಖಾಧಿಕಾರಿಗಳ ಪ್ರಕಾರ, ಬಿಕಾಂ ಕೋರ್ಸ್ ಅರ್ಧಕ್ಕೆ ಬಿಟ್ಟ ಉಜೈಫ್, ಹಣ ಸಾಗಿಸುವ ದಲ್ಲಾಳಿಯಾಗಿ ಈ ವಂಚನೆ ಜಾಲದಲ್ಲಿ ಸೇರಿಕೊಳ್ಳುತ್ತಾನೆ. ತನ್ನ ತಾಯಿ ಸಹಾಯದಿಂದ, ಅವನು ಸುಮಾರು 4,200 ಬ್ಯಾಂಕ್ ಖಾತೆಗಳನ್ನು ನಿರ್ವಹಿಸುತ್ತಿದ್ದ. ಇನ್ನು ಇವನ ಜತೆಗಿದ್ದ ಗುಂಪುಗಳು 9,000 ಅಂತಹದೇ ಖಾತೆ ಗಳನ್ನು ನಿರ್ವಹಿಸುತ್ತಿತ್ತು. ಈ ಖಾತೆಗಳ ಮೂಲಕ ಸುಮಾರು 24 ಕೋಟಿ ರು. ನಿರ್ವಹಣೆ ಮಾಡಲಾಗುತ್ತಿತ್ತು. ಉಜೈಫ್ ಒಬ್ಬನೇ ಪ್ರತಿ ವರ್ಷ 25 ಲಕ್ಷಕ್ಕೂ ಹೆಚ್ಚು ಸಂಪಾದಿಸುತ್ತಿದ್ದ ಎಂದು ಪೊಲೀಸರು ಹೇಳಿದ್ದಾರೆ.

ದುಬೈ ಮೂಲದ ಭಾರತೀಯ ವ್ಯಕ್ತಿ ಪ್ರೇಮ್ ತನೇಜಾ ಜತೆಗೆ ಈ ಹಣ ಸಾಗಣೆಯನ್ನು ವಹಿವಾಟುಗಳನ್ನು ಹೊಂದಿದ್ದ ಎಂದು ವರದಿ ಹೇಳಿದೆ. ಪ್ರೇಮ್ ತನೇಜಾ ಅನ್ನು ಈ ಹಿಂದೆ 2013 ರ ಐಪಿಎಲ್ ಸ್ಪಾಟ್ ಫಿಕ್ಸಿಂಗ್ ಪ್ರಕರಣದಲ್ಲಿ ಬಂಧಿಸಲಾಗಿತ್ತು. ಈ ವ್ಯವಹಾರವನ್ನು ಮಾಡಲು ಪ್ರೇಮ್ ತನೇಜಾ, ಉಜೈಫ್‌ನ ತಾಯಿ ಜತೆಗೆ ಪ್ರಯಾಣ ಬೆಳೆಸಿದ್ದ ಎಂದು ಅಧಿಕಾರಿಗಳು ಹೇಳುತ್ತಾರೆ. ಇವರು ಈ ಜಾಲದ ಮುಂದುವರಿದ ಭಾಗವಾಗಿ ಇಬ್ಬರೂ, ಸರಕಾರಿ ಆಸ್ಪತ್ರೆಗಳು ಮತ್ತು ಕಾಲೇಜುಗಳಿಗೆ ಭೇಟಿ ನೀಡಿ ಅಲ್ಲಿನ ಜನರನ್ನು ಹಾಗೂ ವಿದ್ಯಾರ್ಥಿಗಳನ್ನು 2 ಸಾವಿರ ಹಾಗೂ 5 ಸಾವಿರ ರು.ಗಳ ಖಾತೆ ತೆರೆಯುವಂತೆ ಅವರನ್ನು ಒತ್ತಾಯಿಸುತ್ತಿದ್ದರು. ಕೆಲವೊಂದು ವಿದ್ಯಾರ್ಥಿಗಳು ಹಾಗೂ ಜನರು ಇವರ ಮೋಸದ ಜಾಲಕ್ಕೆ ಬಿದ್ದು, ತಮ್ಮ ಆಧಾರ್ ಕಾರ್ಡ್, ಪಾನ್ ಕಾರ್ಡ್, ಇತರ ದಾಖಲೆಯನ್ನು ಈ ಮೋಸಗಾರರಿಗೆ ನೀಡಿದ್ದಾರೆ.

ನಂತರ ಈ ದಾಖಲೆಗಳನ್ನು ದೆಹಲಿಯಲ್ಲಿರುವ ಸಹವರ್ತಿಗಳಿಗೆ ಕಳುಹಿಸುತ್ತಿದ್ದರು. ನಂತರ ಅಲ್ಲಿಂದ ಬ್ಯಾಂಕ್ ಖಾತೆಗಳನ್ನು ಹ್ಯಾಕ್ ಮಾಡಿ ಹಣವನ್ನು ಕಬಳಿಸುತ್ತಿದ್ದರು. ಈ ಕೆಲಸ ಮಾಡಿದಕ್ಕೆ ಉಜೈಫ್‌ನ ಮತ್ತು ಆತನ ತಾಯಿಗೆ ಹಣವನ್ನು ಸಂಬಳದ ರೂಪದಲ್ಲಿ ನೀಡುತ್ತಿದ್ದರು. ಈ ಇಬ್ಬರಿಗೆ ಸಹಾಯ ಮಾಡಿದ್ದಕ್ಕಾಗಿ ದೆಹಲಿಯ ಒಂಬತ್ತು ಯುವಕರನ್ನು ಪೊಲೀಸರು ಇಲ್ಲಿಯವರೆಗೆ ಬಂಧಿಸಿದ್ದಾರೆ. ದೇಶಾದ್ಯಂತ 864 ಸೈಬರ್ ಅಪರಾಧ ಪ್ರಕರಣಗಳಲ್ಲಿ ಈ ಗ್ಯಾಂಗ್ ಭಾಗಿಯಾಗಿದೆ ಎಂದು ಹೇಳಲಾಗಿದೆ.

2.5 ಕೋಟಿ ರುಪಾಯಿ ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಜಪ್ತಿ

ಬೆಂಗಳೂರು: ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಬ್ಯಾಂಕಾಕ್‌ನಿಂದ ಆಗಮಿಸಿದ ಪ್ರಯಾಣಿಕರಿಂದ ಬರೋಬ್ಬರಿ 6.24 ಕೆಜಿ ಹೈಡ್ರೋಪೋನಿಕ್ ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ. ಅದರ ಬೆಲೆ 2.18 ಕೋಟಿ ರುಪಾಯಿ ಮೌಲ್ಯ ಆಗಿದೆ.

2026ರ ಜನವರಿ ತಿಂಗಳ ಆರಂಭದಲ್ಲೇ ದೇಶದ ವಿವಿಧ ವಿಮಾನ ನಿಲ್ದಾಣಗಳಲ್ಲಿ ನಡೆದ ಮೂರನೇ ಪ್ರಮುಖ ಡ್ರಗ್ಸ್ ಬೇಟೆ ಇದಾಗಿದ್ದು, ಆಗ್ನೇಯ ಏಷ್ಯಾದಿಂದ ಭಾರತಕ್ಕೆ ಪೂರೈಕೆಯಾಗುತ್ತಿರುವ ಮಾದಕ ವಸ್ತುವಿನ ಕಳ್ಳಸಾಗಣೆ ಜಾಲಕ್ಕೆ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ. ಇತ್ತೀಚೆಗಷ್ಟೇ ಹೈದರಾಬಾದ್‌ನಲ್ಲಿ 14 ಕೋಟಿ ರು. ಮೌಲ್ಯದ 14 ಕೆಜಿ ಹಾಗೂ ಬೆಂಗಳೂರಿನಲ್ಲಿ 1.75 ಕೋಟಿ ರು. ಮೌಲ್ಯದ 5 ಕೆಜಿ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿತ್ತು.

ಹೈಡ್ರೋಪೋನಿಕ್ ಗಾಂಜಾ ಎನ್ನುವುದು ಸಾಮಾನ್ಯ ಗಾಂಜಾಕ್ಕಿಂತ ಹೆಚ್ಚು ಅಪಾಯಕಾರಿ ಮತ್ತು ದುಬಾರಿಯಾದ ಮಾದಕ ವಸ್ತುವ. ಇದನ್ನು ಮಣ್ಣಿನ ಬದಲಿಗೆ ಪೋಷಕಾಂಶಯುಕ್ತ ದ್ರಾವಣಗಳನ್ನು ಬಳಸಿ ಕೃತಕವಾಗಿ ಬೆಳೆಸಲಾಗುತ್ತದೆ. 'ಜರ್ನಲ್ ಆಫ್ ಕ್ಯಾನಬಿಸ್ ರಿಸರ್ಚ್ ವರದಿಗಳ ಪ್ರಕಾರ, ಸಾಮಾನ್ಯ ಗಾಂಜಾಕ್ಕಿಂತ ಇದರಲ್ಲಿ ಟಿಎಚ್‌ಸಿ ಅಂಶವು ಶೇ. 20ಕ್ಕಿಂತಲೂ ಅಧಿಕವಿರುತ್ತದೆ. ಇದು ಸಾಂಪ್ರದಾಯಿಕ ಗಾಂಜಾಕ್ಕಿಂತ ಎರಡು ಪಟ್ಟು ಹೆಚ್ಚು ಅಮಲು ನೀಡುವ ಸಾಮರ್ಥ್ಯ ಹೊಂದಿದ್ದು, ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಒಂದು ಕೆ.ಜಿಗೆ ಸುಮಾರು 35 ಲಕ್ಷ ರುಪಾಯಿಗಳಷ್ಟು ಭಾರಿ ಬೆಲೆ ಹೊಂದಿದೆ.

ಮಾದಕ ವಸ್ತುಗಳ ಪತ್ತೆಯಾದ ಹಿನ್ನೆಲೆಯಲ್ಲಿ ಎನ್‌ಡಿಪಿಎಸ್ ಕಾಯಿದೆಯಡಿ ಪ್ರಕರಣ ದಾಖಲಿಸಿಕೊಂಡಿರುವ ಅಧಿಕಾರಿಗಳು ಆರೋಪಿಗಳನ್ನು ಬಂಧಿಸಿದ್ದಾರೆ. ಈ ಕಾಯಿದೆಯಡಿ ಅಪರಾಧ ಸಾಬೀತಾದಲ್ಲಿ 10 ರಿಂದ 20 ವರ್ಷಗಳವರೆಗೆ ಕಡ್ಡಾಯ ಜೈಲು ಶಿಕ್ಷೆ ವಿಧಿಸಲು ಅವಕಾಶವಿದೆ. ಮಾದಕ ದ್ರವ್ಯ ನಿಯಂತ್ರಣ ಮಂಡಳಿ ನೀಡಿರುವ ವರದಿಗಳ ಪ್ರಕಾರ, 2023 ರಿಂದೀಚೆಗೆ ಭಾರತದಲ್ಲಿ ಸಿಂಥೆಟಿಕ್ ಡ್ರಗ್ಸ್‌ಗಳ ಹಾವಳಿ ಶೇ.30ರಷ್ಟು ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ತಪಾಸಣೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದ್ದು, ಡ್ರಗ್ಸ್ ಜಾಲದ ಬೇರುಗಳನ್ನು ಹುಡುಕಲು ಅಧಿಕಾರಿಗಳು ಜಾಲ ಬೀಸಿದ್ದಾರೆ.

ತಂಗಿ ವಿರುದ್ಧ ಕಾರುಣ್ಯ ರಾಮ್ ದೂರು

ಬೆಂಗಳೂರು: ನಟಿ ಕಾರುಣ್ಯ ರಾಮ್ ಅವರು ತನ್ನ ಸಹೋದರಿ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಕೆಟ್ಟದಾಗಿ ಕಮೆಂಟ್ ಮಾಡಿದರ ವಿರುದ್ಧ ಸಿಸಿಬಿಗೆ ದೂರು ನೀಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ತಮ್ಮ ಸಹೋದರಿಗೆ ಸಾಲ ನೀಡಿದವರ ಪೈಕಿ ಕೆಲವರು ಅಶ್ಲೀಲವಾಗಿ ಸಂದೇಶ ಕಳುಹಿಸಿದ ಆರೋಪದಡಿ ನಟಿ ದೂರು ನೀಡಿದ್ದಾರೆ. ಹಾಗೆಯೇ ಮನೆಯಲ್ಲಿರುವ ಆಭರಣ, ಹಣ ತೆಗೆದುಕೊಂಡಿರುವ ಬಗ್ಗೆ ಸಹೋದರಿ ಸಮೃದ್ಧಿ ಹಾಗೂ ಪ್ರತಿಭಾ, ಕಪಿಲ್, ಪ್ರಜ್ವಲ್, ರಕ್ಷಿತ್ ಮತ್ತು ಸಾಗರ್ ಎಂಬುವರ ವಿರುದ್ಧ ದೂರು ದಾಖಲಿಸಿದ್ದಾರೆ.

ಆರ್.ಆರ್.ನಗರದಲ್ಲಿ ವಾಸವಾಗಿರುವ ನಟಿ ಕಾರುಣ್ಯರಾಮ್ ತಂದೆ-ತಾಯಿ ಹಾಗೂ ಸಹೋದರಿಯೊಂದಿಗೆ ಒಟ್ಟಿಗೆ ವಾಸವಾಗಿದ್ದಾರೆ. ಸಹೋದರಿ ಸಮೃದ್ಧಿ ರಾಮ್ ವಿರುದ್ಧ 2023ರಲ್ಲಿ ಆರ್.ಆರ್.ನಗರ ಪೊಲೀಸ್ ಠಾಣೆಯಲ್ಲಿ ನಟಿ ದೂರು ದಾಖಲಿಸಿದ್ದರು. ಈಗ ಮತ್ತೆ ನನ್ನ ತಂಗಿಯು ಮನೆಯಲ್ಲಿದ್ದ 25 ಲಕ್ಷ ಮೌಲ್ಯದ ಚಿನ್ನ ಹಾಗೂ ಹಣವನ್ನು ಯಾರಿಗೂ ತಿಳಿಸದೆ ಸ್ವಂತಕ್ಕೆ ಬಳಸಿಕೊಂಡಿದ್ದಾರೆ. ಸಮೃದ್ಧಿ ಅವರು ಬೊಟಿಕ್ ವ್ಯವಹಾರದಲ್ಲಿ ನಷ್ಟವಾಗಿದಲ್ಲದೆ, 25 ಲಕ್ಷ ಹಣವನ್ನು ಆನ್‌ಲೈನ್ ಬೆಟ್ಟಿಂಗ್‌ನಲ್ಲಿ ಹೂಡಿ ಕಳೆದುಕೊಂಡಿದ್ದರು. ಇದನ್ನು ಪ್ರಶ್ನಿಸಿದ್ದಕ್ಕೆ ಕುಟುಂಬದಿಂದ ಸಮೃದ್ಧಿ ದೂರವಾಗಿದ್ದರು. ಸಮೃದ್ಧಿಗೆ ಸಾಲ ನೀಡಿದ್ದವರು ನಟಿ ಹಿಂದೆ ಬಿದ್ದಿದ್ದರು. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡುವ ಫೋಟೋಗಳಿಗೆ ಕೆಟ್ಟದಾಗಿ ಕಾಮೆಂಟ್ ಮಾಡಿದ್ದಾರೆ ಎಂದು ಆರೋಪಿಸಿ ದಾಖಲೆ ಸಮೇತ ನಟಿ ದೂರು ನೀಡಿದ್ದಾರೆ.

ಅಡವಿಟ್ಟಾಗ ಅಸಲಿ, ಬ್ಯಾಂಕ್‌ನಿಂದ ಬಿಡಿಸಿಕೊಂಡಾಗ ನಕಲಿ ಬಂಗಾರ

ಬೆಂಗಳೂರು: ಅಡವಿಟ್ಟು ಬಿಡಿಸಿಕೊಂಡಿದ್ದ ಚಿನ್ನದ ಚೈನ್ ಪರಿಶೀಲಿಸಿದಾಗ ನಕಲಿ ಎಂಬುವುದು ಪತ್ತೆ ಆಗಿದೆ. ಬೆಂಗಳೂರಿನ ಮಹಾಲಕ್ಷ್ಮೀ ಲೇಔಟ್‌ನ ಎಸ್‌ಬಿಐ ಶಾಖೆಯಲ್ಲಿ ಘಟನೆ ನಡೆದಿದ್ದು, ದಂಪತಿ ಮೋಸ ಹೋಗಿದ್ದಾರೆ. ಮಹಾಲಕ್ಷ್ಮೀ ಲೇಔಟ್ ಠಾಣೆಗೆ ದೂರು ನೀಡಲಾಗಿದೆ. ಬೆಂಗಳೂರಿನ ಮಹಾಲಕ್ಷ್ಮೀ ಲೇಔಟ್‌ನ ಎಸ್‌ಬಿಐ ಶಾಖೆಯಲ್ಲಿ 1 ವರ್ಷದ ಹಿಂದೆ ಮುಕೇಶ್ ಮತ್ತು ಪೂರ್ಣಿಮಾ ದಂಪತಿ ಚಿನ್ನದ ಚೈನ್ ಬ್ಯಾಂಕ್‌ನಲ್ಲಿ ಅಡವಿಟ್ಟು 2 ಲಕ್ಷ ರು. ಪಡೆದಿದ್ದರು. ಅಸಲು, ಬಡ್ಡಿ ಸೇರಿ ಪ್ರತಿ ತಿಂಗಳು 11,700 ರು. ಪಾವತಿಸುತ್ತಿದ್ದರು. ಮಂಗಳವಾರ ಸಾಲದ ಮೊತ್ತ ಸಂಪೂರ್ಣ ಪಾವತಿಸಿ ಚೈನ್ ಬಿಡಿಸಿಕೊಂಡಿದ್ದರು. ದುಡ್ಡಿನ ಅವಶ್ಯಕತೆ ಹಿನ್ನೆಲೆ ದಂಪತಿ ಮಾರ್ವಾಡಿ ಅಂಗಡಿಗೆ ತೆರಳಿದ್ದಾರೆ. ಅಲ್ಲಿ ಪರಿಶೀಲನೆ ಮಾಡಿ ನೋಡಿದಾಗ ಅದು ನಕಲಿ ಚಿನ್ನ ಎಂಬುವುದು ಪತ್ತೆ ಆಗಿದೆ. ಕೂಡಲೇ ಮಹಾಲಕ್ಷ್ಮೀ ಲೇಔಟ್‌ನ ಎಸ್‌ಬಿಐ ಶಾಖೆಗೆ ತೆರಳಿದ್ದಾರೆ. ಈ ಬಗ್ಗೆ ಬ್ಯಾಂಕ್‌ನಲ್ಲಿ ಪ್ರಶ್ನಿಸಿದಾಗ ಸಿಬ್ಬಂದಿ ದಂಪತಿ ಆರೋಪ ನಿರಾಕರಿಸಿದ್ದು, ಬೇಜವಾಬ್ದಾರಿ ಉತ್ತರ ನೀಡಿದ್ದಾರೆ. ಸದ್ಯ ದಂಪತಿ ಮಹಾಲಕ್ಷ್ಮೀ ಲೇಔಟ್ ಠಾಣೆಗೆ ದೂರು ನೀಡಿದ್ದಾರೆ.

ವಾಣಿಜ್ಯ ಸಂಕೀರ್ಣದ ಮಳಿಗೆದಾರರು ನವೀಕರಣಕ್ಕೆ ಸೂಕ್ತ ದಾಖಲೆ ಸಲ್ಲಿಸಿ

ಬೆಂಗಳೂರು: ಪಾಲಿಕೆಯ ವಾಣಿಜ್ಯ ಸಂಕೀರ್ಣದ ಮಳಿಗೆದಾರರು ನವೀಕರಣಕ್ಕಾಗಿ ಮಳಿಗೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಿ ಎಂದು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಹೇಳಿದರು.

ಜಯನಗರದ ವಾಣಿಜ್ಯ ಸಂಕೀರ್ಣಗಳು ಹಾಗೂ ಸರ್ ಎಂ. ವಿಶ್ವೇಶ್ವರಯ್ಯ ವಾಣಿಜ್ಯ ಸಂಕೀರ್ಣದಲ್ಲಿರುವ 251 ಮಳಿಗೆಗಳು ಮತ್ತು ಜಯನಗರ 4ನೇ ಬ್ಲಾಕ್‌ನ ಮಾರುಕಟ್ಟೆ ಕಟ್ಟಡದಲ್ಲಿನ 39 ಮಳಿಗೆಗಳ ನವೀಕರಣದ ಅವಧಿಯು ಮುಕ್ತಾಯಗೊಂಡಿರುವುದರಿಂದ ಸರಕಾರದ ನಿಯಮಾವಳಿಯಂತೆ ಈ ಮಳಿಗೆಗಳ ಗುತ್ತಿಗೆಯನ್ನು ನಿಯಮ 8ರಂತೆ ಇನ್ನೊಂದು ಅವಧಿಗೆ ನವೀಕರಿಸಲು ಅವಕಾಶ ಕಲ್ಪಿಸಿ ಅರ್ಜಿಗಳನ್ನು ಸಲ್ಲಿಸಲು ಸೂಚನೆ ನೀಡಲಾಗಿತ್ತು ಹಾಗೂ ಈ ಸಂಬಂಧ ಪ್ರತಿಯೊಂದು ಮಳಿಗೆಯ ಮಳಿಗೆದಾರರಿಗೆ ಪ್ರತ್ಯೇಕ ಸೂಚನಾ ಪತ್ರವನ್ನು ನೀಡಲಾಗಿರುವಂತೆ ಹಲವಾರು ಮಳಿಗೆದಾರರು ಅರ್ಜಿಯೊಂದಿಗೆ ದಾಖಲೆಯನ್ನು ಕಚೇರಿಗೆ ಸಲ್ಲಿಸಿದ್ದಾರೆ.

ಆದರೂ ಸಹ ಆಸ್ತಿ ನಿರ್ವಹಣೆ ನಿಯಮಗಳು-2024 ರಲ್ಲಿ ಗುತ್ತಿಗೆ ಅವಧಿ ಮುಕ್ತಾಯಗೊಂಡಿರುವ ಮಳಿಗೆಗಳ ಬಾಡಿಗೆ/ಗುತ್ತಿಗೆ ನವೀಕರಣಕ್ಕೆ ಅವಕಾಶ ಕಲ್ಪಿಸಿರುವುದನ್ನು ಸದುಪಯೋಗ ಪಡಿಸಿಕೊಂಡು ತಮ್ಮ ತಮ್ಮ ಮಳಿಗೆಗಳಿಗೆ ಸಂಬಂಧಪಟ್ಟ ದಾಖಲೆಗಳನ್ನು ಈಗಾಗಲೇ ಸೂಚನಾ ಪತ್ರದಲ್ಲಿ ಸೂಚಿಸಿರುವಂತೆ ಅರ್ಜಿಯೊಂದಿಗೆ ಸಹಾಯಕ ಕಂದಾಯ ಅಧಿಕಾರಿ (ದಕ್ಷಿಣ-ಮಾರುಕಟ್ಟೆ) ಜಯನಗರ ವಾಣಿಜ್ಯ ಸಂಕೀರ್ಣ ರವರ ಕಚೇರಿಗೆ ಸಲ್ಲಿಸಲು ಸೂಚಿಸಿದೆ.

ನಂದಿ ಕನ್ನಡ ಸೇವಾ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಸುಗ್ಗಿಯ ಹಬ್ಬ ಗ್ರಾಮೀಣ ಸೊಗಡಿನ ಮಕರ ಸಂಕ್ರಾಂತಿ ಹಬ್ಬಕ್ಕೆ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್ ಈ ಸುಧೀಂದ್ರ ಅವರು ಉದ್ಘಾಟಿಸಿದರು. ಈ ವೇಳೆ ಬಿಎಂಟಿಸಿ ಅಧ್ಯಕ್ಷ ಆರಾಧ್ಯ, ಎ.ಮುನಿರಾಜು, ಮಂಗಳಾ ಮುನಿರಾಜು, ಗೌತಮ್, ಪ್ರಶಾಂತ್, ಕೃಷ್ಣ ಮತ್ತಿತರರಿದ್ದರು.



ವರ್ಷದ ಮೊದಲ ಹಬ್ಬವಾದ ಮಕರ ಸಂಕ್ರಾಂತಿಯನ್ನು ಕೆ.ನಾರಾಯಣಪುರ ಬಳಿ ಇರುವ ಶ್ರೇಯನ್ ಪಬ್ಲಿಕ್ ಸ್ಕೂಲ್‌ನಲ್ಲಿ ಅತ್ಯಂತ ಸಂಭ್ರಮ ಹಾಗೂ ಭಕ್ತಿ ಭಾವದಿಂದ ಆಚರಿಸಲಾಯಿತು. ಕಾರ್ಯದರ್ಶಿಗಳಾದ ವೈ.ಕೆ. ವತ್ಸಲಾ, ಪ್ರಾಂಶುಪಾಲರಾದ. ಜ್ಯೋತಿ ಪ್ರಭಾಕರ್, ಉಷಾ ರಾಣಿ ಎಂ., ಶಿಕ್ಷಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಹಬ್ಬಗಳಿಂದ ಮಕ್ಕಳಲ್ಲಿ ಜಾತಿ ಭೇದ ಬರಲ್ಲ

ಬೆಂಗಳೂರು: ಹಬ್ಬಗಳನ್ನು ಒಟ್ಟಿಗೆ ಆಚರಿಸುವುದರಿಂದ ಮಕ್ಕಳಲ್ಲಿ ಜಾತಿ ಭೇದ ಭಾವ ಮೂಡುವುದಿಲ್ಲ ಎಂದು ಸೆಂಟ್ ಫ್ಲವರ್ಸ್ ಇಂಗ್ಲೀಷ್ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಡಾ.ಜಿ.ಆರ್. ಕೃಷ್ಣಪ್ಪ ಅಭಿಪ್ರಾಯಪಟ್ಟರು.

ನಗರದ ಮಾಗಡಿ ರಸ್ತೆಯಲ್ಲಿ ಸೆಂಟ್ ಫ್ಲವರ್ಸ್ ಇಂಗ್ಲೀಷ್ ಶಾಲೆಯಲ್ಲಿ ಗುರುವಾರ ಆಯೋಜಿಸಿದ್ದ ಸಂಕ್ರಾಂತಿ ಹಬ್ಬದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಬ್ಬಗಳ ಆಚರಣೆಯಿಂದ ಮಕ್ಕಳಲ್ಲಿ ಯಾವುದೇ ಜಾತಿ, ಭೇದ-ಭಾವವಿಲ್ಲದೆ ಒಟ್ಟಾಗಿ ಇರುವಂಥ ಮನೋಜ್ಞಾನ ಮಕ್ಕಳಲ್ಲಿ ಮೂಡುತ್ತದೆ. ನಮ್ಮ ಶಾಲೆ ಪ್ರಾರಂಭವಾದಗಿನಿಂದಲೂ ಪ್ರತೀ ರಾಷ್ಟ್ರೀಯ ಹಬ್ಬಗಳೆಲ್ಲವನ್ನೂ ಸಂಪ್ರದಾಯದಂತೆ ಆಚರಿಸಲಾಗುತ್ತಿದೆ ಎಂದರು.

ಶಾಲೆಯ ವ್ಯವಸ್ಥಾಪಕ ನಿರ್ದೇಶಕ ದರ್ಶನ್ ಕೃಷ್ಣ ಮಾತನಾಡಿ, ಜಗತ್ತು ನಿಮ್ಮನ್ನು ಹೇಗೆ ನೋಡುತ್ತದೆ ಎನ್ನುವುದಕ್ಕಿಂತ, ನೀವು ನಿಮ್ಮನ್ನು ಹೇಗೆ ನೋಡಿಕೊಳ್ಳುತ್ತೀರಿ ಎಂಬುದು ಮುಖ್ಯ. ನಿಮ್ಮ ಮೇಲಿರುವ ಆತ್ಮವಿಶ್ವಾಸವೇ ನಿಮ್ಮ ಅತಿದೊಡ್ಡ ಶಕ್ತಿ. ಆ ಶಕ್ತಿಯು ಬೆಟ್ಟದಂತಹ ಸವಾಲನ್ನು ಸಹ ಪುಡಿ ಮಾಡುವ ಸಾಮರ್ಥ್ಯ ಹೊಂದಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ವಿದ್ಯಾರ್ಥಿಗಳು ವಿಭಿನ್ನ ಉಡುಗೆಗಳನ್ನು ತೊಟ್ಟು ಸಂಕ್ರಾಂತಿ ಹಬ್ಬ ಆಚರಿಸಿ, ಪರಸ್ಪರ ಎಳ್ಳು-ಬೆಲ್ಲ ವಿನಿಮಯ ಮಾಡಿಕೊಂಡು ಶುಭಕೋರಿದರು.

ನಗರದ ಮಾಗಡಿ ರೋಡ್‌ನಲ್ಲಿರುವ ಸೆಂಟ್ ಫ್ಲವರ್ಸ್ ಇಂಗ್ಲೀಷ್ ಶಾಲೆಯಲ್ಲಿ ಸಂಕ್ರಾಂತಿ ಹಬ್ಬವನ್ನು ಆಚರಿಸಲಾಯಿತು. ಈ ವೇಳೆ ಸಂಸ್ಥಾಪಕ ಅಧ್ಯಕ್ಷ ಡಾ.ಜಿ.ಆರ್. ಕೃಷ್ಣಪ್ಪ, ವ್ಯವಸ್ಥಾಪಕ ನಿರ್ದೇಶಕ ದರ್ಶನ್ ಕೃಷ್ಣ ಸೇರಿ ಇನ್ನಿತರರು ಉಪಸ್ಥಿತರಿದ್ದರು.

ಸಮಾಚಾರ ಸಣ್ಣದಲ್ಲ

ಜ.18ಕ್ಕೆ ಸಂಗೀತ ಕಾರ್ಯಕ್ರಮ

ಬೆಂಗಳೂರು: ಬೆಂಗಳೂರಿನ ಸಪ್ತಕ ಸಂಸ್ಥೆ ವತಿಯಿಂದ ದಿ. ಪಂ. ಕೆರೆಕೈ ಕಮಲಾಕರ್ ಭಟ್ ಅವರ ಸ್ಮರಣಾರ್ಥ ಸ್ಮಾರಕ ಗೋಷ್ಠಿ ಕಾರ್ಯಕ್ರಮವನ್ನು ಜ.18 ರಂದು ಸಂಜೆ 5.30ಕ್ಕೆ ಮಲ್ಲೇಶ್ವರನ ಸೇವಾ ಸದನ ದಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಗೋಷ್ಠಿಯಲ್ಲಿ ಕಿರಣ್ ಕಮಲಾಕರ್ ಭಟ್, ಅರುಣ್ ಕಮಲಾಕರ್ ಭಟ್, ವಾನಳ್ಳಿಯ ಮಧು ಸೂಧನ್ ಭಟ್, ಮುಂಬೈನ ರುತುಜಾ ಲಾಡ್, ಕುಂದಾಪುರನ ವಿಘ್ನೇಶ್ ಕಾಮತ್, ಬೆಂಗಳೂರಿನ ತೇಜಸ್ ರವೀಂದ್ರ ಕಾಟೋಟಿ ಅವರಿಂದ ಸಂಗೀತ ಕಛೇರಿ ನಡೆಸಿ ಕೊಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಜ.25ಕ್ಕೆ ನಾದ ನಮನ ಸಂಗೀತ ಉತ್ಸವ

ಬೆಂಗಳೂರು: ಜ.25ರಂದು ಬೆಂಗಳೂರಿನಲ್ಲಿ ನಾದ ನಮನ ಸಂಗೀತ ಉತ್ಸವವನ್ನು ಆಯೋಜಿಸಲಾಗಿದೆ. ಪಂಡಿತ್ ಶೇಷಗಿರಿ ಹಾನಗಲ್ ಅವರ ಜನ್ಮ ಶತಮಾನೋತ್ಸವ, ರಾಮಚಂದ್ರ ಯಾವಗಲ್ ಅವರ ಸ್ಮರಣಾರ್ಥ ಬಸವನಗುಡಿಯಲ್ಲಿರುವ ಬೆಂಗಳೂರು ಗಾಯನ ಸಮಾಜದಲ್ಲಿ 'ನಾದ ನಮನ' ಸಂಗೀತ ಉತ್ಸವ ಕಾರ್ಯಕ್ರಮ ಜ.25ರಂದು ಬೆ.9.30ಕ್ಕೆ ಆಯೋಜಿಸಲಾಗಿದೆ. ಕಾರ್ಯಕ್ರಮ ದಲ್ಲಿ ಗುರುಮೂರ್ತಿ ವೈದ್ಯ, ಪ್ರವೀಣ್ ಘೋಡ್ಕಿಂಡಿ ಸೇರಿದಂತೆ ಅನೇಕರಿಂದ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಶೆಡ್‌ಗಳು ಬೆಂಕಿಗಾಹುತಿ

ಬೆಂಗಳೂರು: ಸಿಲಿಂಡರ್ ಸ್ಫೋಟಗೊಂಡು ಅಕ್ರಮ ಬಾಂಗ್ಲಾದೇಶದ ವಲಸಿಗರು ನೆಲೆಸಿದ್ದ ಶೆಡ್‌ಗಳು ಬೆಂಕಿಗಾಹುತಿಯಾದ ಘಟನೆ ಬೇಗೂರಿನ ಎಳೇನಹಳ್ಳಿಯಳ್ಳಿಯಲ್ಲಿರುವ ಡಂಪಿಂಗ್ ಯಾಡ್ ್ನಲ್ಲಿ ನಡೆದಿದೆ. 5 ಎಕರೆ ಜಾಗದಲ್ಲಿ ಅಕ್ರಮವಾಗಿ ನೆಲೆಸಿದ್ದ ಇವರನ್ನು ಕೆಲ ದಿನಗಳ ಹಿಂದೆ ಸ್ಥಳದಿಂದ ಖಾಲಿ ಮಾಡಲಾಗಿತ್ತು.

ಆದರೆ ರಾತ್ರೋರಾತ್ರಿ ಮತ್ತೆ ವಲಸಿಗರು ಇಲ್ಲಿಗೆ ಆಗಮಿಸಿ ಶೆಡ್ ಹಾಕಿದ್ದರು. ತಡರಾತ್ರಿ ಸಿಲಿಂಡರ್ ಸ್ಫೋಟದಿಂದ ಶೆಡ್‌ಗಳು ಹೊತ್ತಿ ಉರಿದಿದ್ದು ಆಗಸದೆತ್ತರಕ್ಕೆ ಬೆಂಕಿಯ ಕೆನ್ನಾಲಿಗೆ ಚಾಚಿತ್ತು. ವಿಚಾರ ತಿಳಿದು ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಆಗಮಿಸಿ ಎರಡು ಗಂಟೆ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಂದಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ದೇವಾಲಯಗಳಲ್ಲಿ ವಿಶೇಷ ಅಭಿಷೇಕ | ಜಾನುವಾರು, ದವಸ-ಧಾನ್ಯಗಳ ರಾಶಿಗೆ ಪೂಜೆ

ಸಂಭ್ರಮದ ಸಂಕ್ರಾಂತಿ ಆಚರಣೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ವರ್ಷದ ಮೊದಲನೇ ಸುಗ್ಗಿಹಬ್ಬ ಸಂಕ್ರಾಂತಿಯನ್ನು ನಾಡಿನೆಲ್ಲೆಡೆ ಸಂಭ್ರಮದಿಂದ ಆಚರಿಸಲಾಯಿತು. ಗುರುವಾರ ಮುಂಜಾನೆಯಿಂದಲೇ ದೇವಾಲಯಗಳಲ್ಲಿ ವಿಶೇಷ ಪೂಜೆ ಅಭಿಷೇಕ ಸೇರಿದಂತೆ ಮತ್ತಿತರ ಪೂಜಾ ಕೈಂಕರ್ಯಗಳು ಶ್ರದ್ಧಾಭಕ್ತಿಯಿಂದ ನೆರವೇರಿದವು.

ಸೂರ್ಯ ಧನುರ್‌ರಾಶಿಯಿಂದ ಮಕರ ರಾಶಿಗೆ ಪ್ರವೇಶ ಮಾಡುವ ಪರ್ವದಿನವನ್ನು ಮಕರ ಸಂಕ್ರಾಂತಿ ಎಂದು ವಿಶೇಷವಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಾಡಿನಾದ್ಯಂತ ಸಂಭ್ರಮದಿಂದ ಹಬ್ಬ ಆಚರಿಲಾಯಿತು. ಎಳ್ಳು-ಬೆಲ್ಲ ತಿಂದು ಒಳ್ಳೆಯ ಮಾತನಾಡೋಣ ಎಂದು ಒಬ್ಬರಿಗೊಬ್ಬರು ಶುಭಾಶಯಗಳನ್ನು ವಿನಿಮಯ ಮಾಡಿಕೊಂಡ ವಿಷಯಗಳು ಕಂಡುಬಂದವು.

ನಾಡಿನ ಹಲವು ದೇವಾಲಯಗಳಲ್ಲಿ ವಿಸ್ಮಯ ನಡೆಯಿತು. ಚಿಕ್ಕಬಳ್ಳಾಪುರ ತಾಲೂಕಿನ ಪುರಾಣ ಪ್ರಸಿದ್ಧ ಕ್ಷೇತ್ರಗಳಲ್ಲಿ ಒಂದಾದ ಐತಿಹಾಸಿಕ ರಂಗಸ್ಥಳ ವೈಷ್ಣವ ಕ್ಷೇತ್ರದಲ್ಲಿ ರಂಗನಾಥ ಸ್ವಾಮಿಯ ಪಾದವನ್ನು ಸೂರ್ಯನ ಕಿರಣಗಳು ಸ್ಪರ್ಶಿಸಿದ ಐತಿಹಾಸಿಕ ಕ್ಷಣವನ್ನು ಭಕ್ತರು ಕಣ್ತುಂಬಿಕೊಂಡರು. ವಿವಿಧ ಬಗೆಯ ಹೂಗಳಿಂದ ಶ್ರೀ ರಂಗನಾಥ ಸ್ವಾಮಿಗೆ ವಿಶೇಷ ಪೂಜಾ ಪುನಸ್ಕಾರಗಳು ನಡೆದವು.

ಹಲವು ದೇವಾಲಯಗಳಲ್ಲಿ ಧನುರ್ಮಾಸದ ಕಡೆಯ ಪೂಜೆ ನಡೆದಿದ್ದು, ಬೆಳಗ್ಗೆ ಎಳನೀರು, ಕ್ಷಿರಾಭಿಷೇಕ, ಸಂಕಲ್ಪ ಪೂಜೆ ಸೇರಿದಂತೆ ಮತ್ತಿತರ ಪೂಜಾ ಕೈಂಕರ್ಯಗಳು ನೆರವೇರಿದವು. 6 ಗಂಟೆಯ ಮಹಾಮಂಗಳಾರತಿ ನಂತರ ಮಧ್ಯಾಹ್ನದವರೆಗೂ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಗ್ರಾಮೀಣ ಭಾಗದಲ್ಲಿ ರೈತರ ಹಬ್ಬ ಸಂಕ್ರಾಂತಿಯನ್ನು ಸಂಭ್ರಮದಿಂದ ಆಚರಿಸಿದರು. ವರ್ಷವಿಡೀ ದುಡಿದ ಜಾನುವಾರುಗಳಿಗೆ ಇಂದು ಶೃಂಗರಿಸಿ ಯಾವುದೇ ರೋಗ ರುಜಿನಗಳು ಬಾರದಿರಲಿ ಎಂದು ಕಿಚ್ಚು ಹಾಯಿಸಿದರು. ಕಷ್ಟಪಟ್ಟು ಬೆಳೆದ ದವಸ-ಧಾನ್ಯ ರಾಶಿಗೆ ಪೂಜೆ ಸಲ್ಲಿಸಿ ಸಂಭ್ರಮಿಸಿದರು. ಸಿಲಿಕಾನ್ ಸಿಟಿಯಲ್ಲೂ ಸಹ ಹಬ್ಬದ ಸಂಭ್ರಮ ಮನೆ ಮಾಡಿತ್ತು.

ಗೋಪೂಜೆ ಮಾಡಿದ ಡಿಸಿಎಂ ಡಿಕೆಶಿ.

ಸಂಸದ ತೇಜಸ್ವಿ ಸೂರ್ಯ ದಂಪತಿ ಪೊಂಗಲ್ ತಯಾರಿಸಿ, ಸಂಕ್ರಾಂತಿ ಹಬ್ಬ ಆಚರಿಸಿದರು.

ಪೊಂಗಲ್ ತಯಾರಿಸಿದ ತೇಜಸ್ವಿ ದಂಪತಿ

ಜಯನಗರ ವಿಧಾನಸಭಾ ಕ್ಷೇತ್ರದ ರಾಗಿಗುಡ್ಡ ವಿವೇಕಾಂದ ವಸತಿ ಸಂಕೀರ್ಣ ಸ್ಲಂ ಪ್ರದೇಶದಲ್ಲಿ ಬಿಜೆಪಿ ನಾಯಕರು ಪೊಂಗಲ್ ತಯಾರಿಸುವ ಮೂಲಕ ಸಂಕ್ರಾಂತಿ ಹಬ್ಬ ಆಚರಿಸಿದರು. ಸಂಕ್ರಾಂತಿ ಹಬ್ಬದ ಅಚರಣೆ ಅಂಗವಾಗಿ ಸಂಸದ ತೇಜಸ್ವಿಸೂರ್ಯ, ಪತ್ನಿ ಸ್ಕಂದ ಶಿವಪ್ರಸಾದ್, ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ಮತ್ತಿತರರು ಪೊಂಗಲ್ ತಯಾರಿಸುವ ಮೂಲಕ ಸಂಭ್ರಮಾಚರಣೆ ಮಾಡಿದರು.

ದಕ್ಷಿಣ ಭಾರತದಲ್ಲಿ ಸಂಕ್ರಾಂತಿ ಹಬ್ಬವನ್ನು ಅದ್ದೂರಿಯಾಗಿ ಅಚರಿಸುತ್ತಾರೆ. ಹಿಂದೂಗಳಿಗೆ ಹಬ್ಬವೆಂದರೆ ಕುಟುಂಬದವರು, ಅಕ್ಕಪಕ್ಕದವರು ಮತ್ತು ಸ್ನೇಹಿತರ ಬಳಗ ಒಟ್ಟಾಗಿ ಸೇರಿ ಅಚರಿಸುವ ಪದ್ದತಿ ಇದೆ ಎಂದರು. ರೈತರಿಗೆ ನಾಡಿನ ಜನರಿಗೆ ಸಂಕ್ರಾಂತಿ ಹಬ್ಬದಲ್ಲಿ ಉತ್ತಮ ಮಳೆ, ಬೇಳೆಯಾಗಲಿ ಸುಖ, ಶಾಂತಿ, ನೆಮ್ಮದ್ದಿ ಸಿಗಲಿ.

-ತೇಜಸ್ವಿಸೂರ್ಯ ಸಂಸದ

ಎಐ ಆಧಾರಿತ ಐ ಪಂಪ್‌ನೆಟ್ ಅಳವಡಿಕೆ

ಬೆಂಗಳೂರು: ವಿಶ್ವದಲ್ಲಿಯೇ ಎಐ ಆಧಾರಿತ ತಂತ್ರಜ್ಞಾನ ಅಳವಡಿಸಿಕೊಂಡ ಮೊದಲ ನೀರು ಸರಬರಾಜು ಸಂಸ್ಥೆ ಎನ್ನುವ ಹೆಗ್ಗಳಿಕೆ ಜಲ ಮಂಡಳಿ ಪಾತ್ರವಾಗಿದ್ದು, ವಾರ್ಷಿಕವಾಗಿ ಮಂಡಳಿಗೆ 40 ಕೋಟಿ ರು. ಹಣ ಉಳಿತಾಯ ವಾಗಲಿದೆ ಎಂದು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ತಿಳಿಸಿದರು.

ಬೆಂಗಳೂರು ಜಲಮಂಡಳಿಯು ತನ್ನ 78 ಪಂಪಿಂಗ್ ಸ್ಟೇಷನ್‌ಗಳಲ್ಲಿ ಎಐ ಆಧಾರಿತ ಸ್ಮಾರ್ಟ್ ಪಂಪ್ ಮಾನಿಟರಿಂಗ್ ಹಾಗೂ ಆಪ್ಟಿಮೈಸೇಷನ್ ತಂತ್ರಜ್ಞಾನ 'ಐ ಪಂಪ್ ನೆಟ್ ' ಅಳವಡಿಸಿಕೊಂಡಿದೆ. ಇದು ವಾರ್ಷಿಕವಾಗಿ 40 ಕೋಟಿ ರು.ಗೂ ಹೆಚ್ಚು ವಿದ್ಯತ್ ವೆಚ್ಚವನ್ನು ಉಳಿತಾಯ ಮಾಡುವಂತಹ ಹೊಸ ತಂತ್ರಜ್ಞಾನವಾಗಿದೆ. ಇಂತಹ ಆಧುನಿಕ ತಂತ್ರಜ್ಞಾನವನ್ನು ನೀರು ಸರಬರಾಜು ಸಂಸ್ಥೆ ಅಳವಡಿಸಿಕೊಂಡಿದ್ದು ಇದೇ ಮೊದಲು ಎಂದು ವಿವರಿಸಿದರು.

ಐ ಪಂಪ್ ನೆಟ್ ಎನ್ನುವುದು ರಿಯಲ್ -ಟೈಮ್ ಸೆನ್ಸಾರ್ , ಕೃತಕ ಬುದ್ಧಿಮತ್ತೆ ಮತ್ತು ಮುನ್ಸೂಚನೆ ನೀಡುವ ತಂತ್ರಜ್ಞಾನಗಳ ಸಮ್ಮಿಲನವಾಗಿದೆ. ಸಾಂಪ್ರದಾಯಿಕ ವಿಧಾನಗಳಿಗಿಂತ ಭಿನ್ನವಾಗಿ, ಈ ವ್ಯವಸ್ಥೆಯು ಪಂಪ್‌ಗಳ ಕಾರ್ಯಕ್ಷಮತೆಯನ್ನು ನಿರಂತರವಾಗಿ ಪರಿಶೀಲಿಸುತ್ತದೆ. ಕಣ್ಣಿಗೆ ಕಾಣದ ನಷ್ಟಗಳನ್ನು ಪತ್ತೆ ಹಚ್ಚುತ್ತದೆ. ಈಗಾಗಲೇ ಈ ವ್ಯವಸ್ಥೆಯು ನಿಗದಿಗಿಂತ ಹೆಚ್ಚು ವಿದ್ಯುತ್ ಬಳಸುತ್ತಿರುವ ಹಲವಾರು ಪಂಪ್‌ಗಳನ್ನು ಗುರುತಿಸಿದೆ. ಈ ಮಾಹಿತಿಯ ಆಧಾರದ ಮೇಲೆ, ಜಲಮಂಡಳಿಯು ಕಡಿಮೆ ದಕ್ಷತೆಯ ಪಂಪ್‌ಗಳನ್ನು ಬದಲಾಯಿಸಿ, ಅಧಿಕ ದಕ್ಷತೆಯ ಪಂಪ್‌ಗಳನ್ನು ಅಳವಡಿಸುವ ಕಾರ್ಯವನ್ನು ಆರಂಭಿಸಿದೆ.

ಬೆಂಗಳೂರು ಪರಿಸರಕ್ಕೂ ಪೂರಕ: ತಂತ್ರಜ್ಞಾನದ ಈ ಮೇಲ್ದರ್ಜೆಗೆ ಏರಿಸುವಿಕೆಯಿಂದಾಗಿ ವಾರ್ಷಿಕವಾಗಿ 40 ಕೋಟಿ ರು.ಗೂ ಹೆಚ್ಚು ವಿದ್ಯುತ್ ವೆಚ್ಚ ಉಳಿತಾಯವಾಗುವ ನಿರೀಕ್ಷೆ ಇದೆ. ಇಂಧನ ವ್ಯರ್ಥವಾಗುವುದನ್ನು ತಡೆ ಗಟ್ಟುವ ಮೂಲಕ, ಜಲಮಂಡಳಿಯು ಕೇವಲ ಆರ್ಥಿಕ ಲಾಭ ಮಾತ್ರವಲ್ಲದೆ, ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡಿ ಬೆಂಗಳೂರಿನ ಪರಿಸರ ಸುಸ್ಥಿರತೆಗೂ ಕೊಡುಗೆ ನೀಡುತ್ತಿದೆ.

ವಿಕಸಿತ ಭಾರತ ಯೂಥ್ ಸಮ್ಮೇಳನದಲ್ಲಿ ಸಂಜಯಕುಮಾರ್ ಬಿರಾದಾರ್ ಭಾಗಿ

ಬೆಂಗಳೂರು: ಸ್ವಾಮಿ ವಿವೇಕಾನಂದ ಜಯಂತೋತ್ಸವ ಪ್ರಯುಕ್ತ ನವದೆಹಲಿಯ ಭಾರತ ಮಂಟಪದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಮ್ಮುಖದಲ್ಲಿ ಜರುಗಿದ ವಿಕಸಿತ ಭಾರತ ಯಂಗ್ ಲೀಡರ್ ಡೈಲಾಗ್ 2026ರ ಕಾರ್ಯಕ್ರಮದಲ್ಲಿ ಕರ್ನಾಟಕವನ್ನು ಸಂಜಯಕುಮಾರ್ ಬಿರಾದಾರ್ ಪ್ರತಿನಿಧಿ ಸಿದ್ದು, ನಾಲ್ಕು ದಿನಗಳ ಕಾಲ ನಡೆದ ಮಹತ್ವದ ಬೌದ್ಧಿಕ, ವೈಚಾರಿಕ ವಿಷಯಾಧಾರಿತ ಸಮಾವೇಶದಲ್ಲಿ ಕರ್ನಾಟಕ ರಾಜ್ಯದಿಂದ ಪಾಥ್ ಬ್ರೇಕರ್ ಆಗಿ ಸಂಜಯಕುಮಾರ ಅವರನ್ನು ಆಹ್ವಾನಿಸಲಾಗಿತ್ತು. ಈ ಕುರಿತು ಸಂಜಯಕುಮಾರ ಬಿರಾದಾರ್ ಮಾತನಾಡಿ, ಈ ಅಪೂರ್ವ ಕಾರ್ಯಕ್ರಮಕ್ಕೆ ಭಾಗವಹಿಸಿರುವುದು ದೊಡ್ಡ ಸಂತಸ ತರಿಸಿದೆ. ಪ್ರಧಾನ ಮಂತ್ರಿಗಳನ್ನು ಅತ್ಯಂತ ಹತ್ತಿರದಿಂದ ಕಾಣುವ ಅವಕಾಶ ದೊರಕಿದ್ದು, ಕಾರ್ಯಕ್ರಮದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿರುವುದು ನನಗೆ ಹೆಮ್ಮೆ ತರಿಸಿದೆ. ಸರ್ದಾರ ವಲ್ಲಭಭಾಯಿ ಪಟೇಲ್ ಅವರ ಸ್ಮರಣಾರ್ಥ ಗುಜರಾತ್‌ನಲ್ಲಿ ನಡೆದ ಏಕತಾ ಓಟದಲ್ಲಿ ಅರಾವಳಿ ಎಂಬ ತಂಡವನ್ನು ಸಮರ್ಥವಾಗಿ ಮುನ್ನಡೆಸಿದ ಕಾರ್ಯ ಹಾಗೂ ಪರಿಸರ, ರಕ್ತದಾನ ಮತ್ತು ಯುವ ಸಬಲೀಕರಣ ಕಾರ್ಯದಲ್ಲಿ ತೊಡಗಿಸಿಕೊಂಡ ಸೇವೆಯನ್ನು ಪರಿಗಣಿಸಿ ಈ ಸಂವಾದಕ್ಕೆ ಆಯ್ಕೆ ಮಾಡಲಾಗಿತ್ತು ಎಂದು ತಿಳಿಸಿದ್ದಾರೆ.

ನೀರಿನ ಅದಾಲತ್ ಇಂದು

ಬೆಂಗಳೂರು: ಬೆಂಗಳೂರು ಜಲಮಂಡಳಿಯು ಜ.16ರ ಬೆಳಗ್ಗೆ 9.30ರಿಂದ 11.00 ಗಂಟೆಯವರೆಗೆ ನೀರಿನ ಅದಾಲತ್‌ನ್ನು ಆಯೋಜಿಸಿದೆ ಎಂದು ಮಂಡಳಿ ತಿಳಿಸಿದೆ. ನಗರದ (ವಾಯುವ್ಯ-2), (ವಾಯುವ್ಯ-4),(ಕೇಂದ್ರ-1-2), (ಈಶಾನ್ಯ-2), (ಉತ್ತರ-1-2), (ಉತ್ತರ-2-2), (ದಕ್ಷಿಣ-1-2), (ದಕ್ಷಿಣ-2-2),(ನೈರುತ್ಯ-2),(ನೈರುತ್ಯ-5) (ಪೂರ್ವ-1-3) ಮತ್ತು (ಪೂರ್ವ-2-3) ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಸಾರ್ವಜನಿಕರು ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916 ಗೆ ಕರೆ ಮಾಡಿ ಅಥವಾ ವಾಟ್ಸ್‌ಆಪ್ ಸಂಖ್ಯೆ:8762228888 ಸಂದೇಶದ ಮೂಲಕ ದೂರು ಸಲ್ಲಿಸಬಹುದು ಎಂದು ಮಂಡಳಿ ತಿಳಿಸಿದೆ.

ಅನಧಿಕೃತ ಮನೆ ಕೆಡವಲು ಆದೇಶ

ಬೆಂಗಳೂರು: ಹೊರಮಾವಿನ 39 ಮನೆಗಳನ್ನು ಕೆಡವಲು ಬೆಂಗಳೂರು ಪೂರ್ವ ನಗರ ಪಾಲಿಕೆ ದೃಢೀಕರಣ ಆದೇಶವನ್ನು ಹೊರಡಿಸಿದೆ. ತ್ಯಾಜ್ಯ ಸಂಸ್ಕರಣಾ ಘಟಕಕ್ಕಾಗಿ ಉದ್ದೇಶಿಸಲಾದ ಭೂಮಿಯನ್ನು ಆಕ್ರಮಿಸಿಕೊಂಡು ಜನರು ಮನೆಗಳನ್ನು ನಿರ್ಮಿಸಿದ್ದು, ಮಾಲೀಕರು ವಿವಿಧ ಸರ್ವೆ ನಂಬರ್‌ನ ಸುಮಾರು 1 ಎಕರೆ ಭೂಮಿಯಲ್ಲಿ 39 ಮನೆಗಳನ್ನು ನಿರ್ಮಿಸಿದ್ದಾರೆ. ಈ ಮನೆಗಳ ನಡುವೆ ಸರಿಯಾದ ಅಂತರವೇ ಇಲ್ಲ ಮತ್ತು ಅಗ್ನಿ ಸುರಕ್ಷತಾ ಎನ್‌ಒಸಿ ಹೊಂದಿಲ್ಲ. ಜನವರಿ 7 ರಂದು ಆದೇಶ ಹೊರಡಿಸಲಾಗಿದ್ದು, ಅನಧಿಕೃತ ಕಟ್ಟಡಗಳನ್ನು ತಾವೇ ತೆರವುಗೊಳಿಸಲು ಮಾಲೀಕರಿಗೆ 30 ದಿನಗಳ ಗಡುವನ್ನು ನೀಡಲಾಗಿದ್ದು, ಇದು ವಿಫಲವಾದರೆ ಬಿಇಸಿಸಿ ಅವುಗಳನ್ನು ನೆಲಸಮಗೊಳಿಸುತ್ತದೆ ಮತ್ತು ಸಾರಿಗೆ, ಸಿಬ್ಬಂದಿ ಮತ್ತು ಯಂತ್ರೋಪಕರಣಗಳ ವೆಚ್ಚವನ್ನು ಆಸ್ತಿ ಮಾಲೀಕರಿಂದಲೇ ವಸೂಲಿ ಮಾಡುತ್ತದೆ. ಕೆಆರ್‌ಪುರ ಜಂಟಿ ಆಯುಕ್ತೆ ಸುಧಾ ಮಾಹಿತಿ ನೀಡಿ, ಬಿಇಸಿಸಿ ಡಿಸೆಂಬರ್‌ನಲ್ಲಿ ಅಗತ್ಯವಿರುವ ಅಂತರ ಮಾರ್ಗಸೂಚಿಗಳನ್ನು ಅನುಸರಿಸದೆ ನಿರ್ಮಿಸಲಾಗಿರುವುದರಿಂದ ಮಳೆ ನೀರಿನ ಚರಂಡಿಯ ಉದ್ದಕ್ಕೂ ನಿರ್ಮಿಸಲಾದ 39 ಮನೆಗಳ ವಿರುದ್ಧ ತಾತ್ಕಾಲಿಕ ಆದೇಶವನ್ನು ಹೊರಡಿಸಿದೆ ಎಂದು ಹೇಳಿದರು.

ಬೆಂಗಳೂರು ಪ್ರೆಸ್ ಕ್ಲಬ್ ವತಿಯಿಂದ 2026ನೇ ಸಾಲಿನ ವಾರ್ಷಿಕ ವಿಶೇಷ ಗೌರವ ಪ್ರಶಸ್ತಿಯನ್ನು ಸತ್ಯಸಾಯಿ ಲೋಕ ಸೇವಾ ಟ್ರಸ್ಟ್‌ನ ಅಧ್ಯಕ್ಷ ಮಧುಸೂಧನ ಸಾಯಿ ಅವರಿಗೆ ಪ್ರದಾನ ಮಾಡಲಾಯಿತು. ಈ ವೇಳೆ ಶಾಸಕ ಟಿ.ಬಿ.ಜಯಚಂದ್ರ, ಪ್ರೆಸ್‌ಕ್ಲಬ್ ಅಧ್ಯಕ್ಷ ಆರ್.ಶ್ರೀಧರ್, ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಬೆಳ್ಳಿತಟ್ಟೆ, ಖಜಾಂಚಿ ಶರಣು, ನಿರ್ದೇಶಕ ಸಿ.ಆರ್.ಮಂಜುನಾಥ್ ಉಪಸ್ಥಿತರಿದ್ದರು.

3 ಪುರಸಭಾ ಚುನಾವಣಾ ವೇಳಾಪಟ್ಟಿ ಪ್ರಕಟ

ಬೆಂಗಳೂರು: ಬೆಂಗಳೂರು ನಗರ ಜಿಲ್ಲಾ ಯೋಜನಾ ಸಮಿತಿಯು ನಗರ ಸ್ಥಳೀಯ ಸಂಸ್ಥೆಗಳಾದ ಹೆಬ್ಬಗೋಡಿ ನಗರಸಭೆ, ಜಿಗಣಿ ಮತ್ತು ಚಂದಾಪುರ ಪುರಸಭೆಗಳಿಗೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಜ.22 ರವರೆಗೆ ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಾಮಪತ್ರಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಜನವರಿ 23 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಜನವರಿ 27 ರಂದು ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನವಾಗಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ. ಮತದಾನವು ಫೆಬ್ರವರಿ 4 ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಡೆಯಲಿದೆ. ಅಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಂಜೆ 4 ರಿಂದ ಮತಗಳ ಎಣಿಕೆ ಕಾರ್ಯವು ನಡೆಯಲಿದ್ದು, ಬಳಿಕ ಫಲಿತಾಂಶ ಪ್ರಕಟಿಸಲಾಗುತ್ತದೆ. ಫೆಬ್ರವರಿ 5 ರಂದು ಚುನಾವಣೆಯು ಪೂರ್ಣಗೊಳ್ಳಲಿದೆ ಎಂದು ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ನ ಚುನಾವಣಾ ಅಧಿಕಾರಿಗಳು ಜಿಲ್ಲಾ ಯೋಜನಾ ಸಮಿತಿ ಚುನಾವಣೆ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗವಿಗಂಗಾಧರೇಶ್ವರನ ಸ್ಪರ್ಶಿಸಿದ ಸೂರ್ಯರಶ್ಮಿ

ಬೆಂಗಳೂರು: ಮಕರ ಸಂಕ್ರಾಂತಿ ಹಿನ್ನೆಲೆ ಗವಿಪುರಂ ಗುಟ್ಟಹಳ್ಳಿಯಲ್ಲಿರುವ ಗವಿಗಂಗಾಧರೇಶ್ವರ ದೇವಾಲಯದಲ್ಲಿ ಶಿವಲಿಂಗವನ್ನು ಸಂಜೆ 5 ಗಂಟೆ 19 ನಿಮಿಷಕ್ಕೆ ಶಿವಲಿಂಗವನ್ನು ಸೂರ್ಯರಶ್ಮಿ ಸ್ಪರ್ಶಿಸಿದ್ದು, ಭಕ್ತರು ಅಪರೂಪದ ದೃಶ್ಯವನ್ನು ಕಣ್ತುಂಬಿಕೊಂಡರು.

ನಂದಿ ಕೊಂಬಿನ ಮೂಲಕ ಶಿವನ ಗರ್ಭಗೃಹ ಪ್ರವೇಶಿಸಿದ ಸೂರ್ಯರಶ್ಮಿ, ಸುಮಾರು 2 ನಿಮಿಷ ಶಿವಲಿಂಗವನ್ನು ಸ್ಪರ್ಶಿಸಿದೆ. ದೇವರ ದರ್ಶನಕ್ಕೆ ಸುಮಾರು 200 ಮೀಟರ್‌ನಷ್ಟು ಉದ್ದದ ಸರತಿ ಸಾಲಲ್ಲಿ ಭಕ್ತರು ನಿಂತಿದ್ದು, ದೇವಸ್ಥಾನದ ಆವರಣದಲ್ಲಿಎಲ್‌ಇಡಿ ಸ್ಕ್ರೀನ್ ವ್ಯವಸ್ಥೆ ಮಾಡಲಾಗಿದೆ. ಮೋಡ ಕವಿದ ವಾತಾವರಣದಿಂದಾಗಿ 2025ರಲ್ಲಿ ಸೂರ್ಯ ರಶ್ಮಿ ಶಿವಲಿಂಗವನ್ನು ಸ್ಪರ್ಶಿಸಲು ಸಾಧ್ಯವಾಗಿರಲಿಲ್ಲ. ಮಧ್ಯಾಹ್ನದಿಂದ ದೇವಾಲಯಕ್ಕೆ ಆಗಮಿಸಿದ್ದ ಅನೇಕ ಭಕ್ತಾಧಿ ಗಳು ಸಂಜೆ ಸೂರ್ಯ ರಶ್ಮಿಯನ್ನು ಕಣ್ತುಂಬಿಕೊಂಡರು. ಸೂರ್ಯ ರಶ್ಮಿ ಸ್ಪರ್ಶಿಸಿದ ವೇಳೆ ಪೂರ್ಣವಾದ್ಯಗಳೊಂದಿಗೆ ವಿವಿಧ ಪೂಜಾ ಕೈಂಕರ್ಯಗಳು ಜರುಗಿದವು.

ಮೊದಲು ದೇಗುಲದ ಹಂಸ ದ್ವಾರದ ಮೂಲಕ ನಂದಿಯನ್ನ ಸ್ಪರ್ಶಿಸಿದ ಭಾಸ್ಕರ ಬಳಿಕ ನಂದಿಯ ಕೊಂಬಿನ ಮೂಲಕ ಹಾದುಹೋಗಿ ಈಶ್ವರನ ಪೀಠ ಸ್ಪರ್ಶಿಸಿದ್ದಾನೆ, ನಂತರ ನಿಧಾನವಾಗಿ ಶಿವಲಿಂಗ ಸ್ಪರ್ಶಿಸಿದ್ದಾನೆ. ಈ ವಿಸ್ಮಯವನ್ನ ಭಕ್ತಗಣ ಕಣ್ತುಂಬಿಕೊಂಡಿದೆ.

ತಿಂಗಳಲ್ಲಿ ಬಾಕಿ ರಸ್ತೆ ಕಾಮಗಾರಿ ಪೂರ್ಣಗೊಳಿಸಿ

ಬೆಂಗಳೂರು: ಜಿಬಿಎ ವ್ಯಾಪ್ತಿಯಲ್ಲಿ ಪ್ರಮುಖ ಯೋಜನೆಗಳಿಗೆ ಗಡುವು ನಿಗದಿಪಡಿಸಲಾಗಿದ್ದು, 694 ಕೋಟಿ ರು. ಪ್ಯಾಕೇಜ್‌ನಡಿಯಲ್ಲಿ ಬಾಕಿಯಿರುವ ಎಲ್ಲಾ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಒಂದು ತಿಂಗಳಿನಲ್ಲಿ ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ.

ಜಿಬಿಎನ ಬೆಂಗಳೂರಿನ ಪೂರ್ವ ನಗರ ಪಾಲಿಕೆಯ ವ್ಯಾಪ್ತಿಯ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಪೂರ್ವ ನಗರ ಪಾಲಿಕೆ ಆಯುಕ್ತ ಡಿ.ಎಸ್.ರಮೇಶ್ ಭೇಟಿ ನೀಡಿ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲನೆ ನಡೆಸಿದ್ದು, ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು 1 ತಿಂಗಳಲ್ಲಿ ಪೂರ್ಣಗೊಳಿಸಬೇಕು ಎಂದು ಹೇಳಿದ್ದಾರೆ.

ಪೂರ್ವ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ 694 ಕೋಟಿ ರು. ಪ್ಯಾಕೇಜ್ ನಡಿಯಲ್ಲಿ ಕೈಗೊಳ್ಳುತ್ತಿರುವ ಹೊರಮಾವು - ಅಗರ ಮುಖ್ಯರಸ್ತೆ, ಹೊರಮಾವು - ಕಲ್ಕೆರೆ ಮುಖ್ಯರಸ್ತೆ, ರಾಮಮೂರ್ತಿನಗರ - ಕಲ್ಕೆರೆ ಮುಖ್ಯರಸ್ತೆ, ಕಲ್ಕೆರೆ - ಚನ್ನಸಂದ್ರ ಮುಖ್ಯರಸ್ತೆ, ವಡ್ಡರಪಾಳ್ಯ ಮುಖ್ಯರಸ್ತೆ ಹಾಗೂ ಇನ್ನುಳಿದ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದ ಆಯುಕ್ತರು, ಬಾಕಿಯಿರುವ ವಿವಿಧ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಉತ್ತಮ ಗುಣಮಟ್ಟದೊಂದಿಗೆ ಒಂದು ತಿಂಗಳೊಳಗಾಗಿ ಪೂರ್ಣಗೊಳಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಖಡಕ್ ಸೂಚನೆ ನೀಡಿದ್ದಾರೆ.

ವಡ್ಡರಪಾಳ್ಯ ಮುಖ್ಯರಸ್ತೆ ಕಾಮಗಾರಿಗೆ ಡೆಡ್‌ಲೈನ್: ವಡ್ಡರಪಾಳ್ಯ ಮುಖ್ಯ ರಸ್ತೆಯಲ್ಲಿ ಬೆಂಗಳೂರು ಜಲಮಂಡಳಿ ವತಿಯಿಂದ ಕೈಗೊಂಡಿರುವ ಒಳಚರಂಡಿ ಪೈಪ್‌ಲೈನ್ ಅಳವಡಿಕೆ ಕಾರ್ಯ ನಿಧಾನಗತಿಯಲ್ಲಿ ನಡೆಯುತ್ತಿದ್ದು, ಒಂದು ತಿಂಗಳ ಅವಧಿಯಲ್ಲಿ ಒಳಚರಂಡಿ ಪೈಪ್ ಲೈನ್ ಅಳವಡಿಸುವ ಕಾಮಗಾರಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲು ಅಧಿಕಾರಿಗಳಿಗೆ ತಿಳಿಸಿದ್ದು, ಬಿಡಬ್ಲ್ಯೂಎಸ್‌ಎಸ್‌ಬಿ ಕಾಮಗಾರಿ ಮುಗಿದ ತಕ್ಷಣವೇ ರಸ್ತೆ ಅಭಿವೃದ್ಧಿ ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ. ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಕಸ್ತೂರಿನಗರ ದಲ್ಲಿ ಕೆಂಪೇಗೌಡ ಕೆಳ ಸೇತುವೆಯಿಂದ -ಬೆನ್ನಿಗಾನಹಳ್ಳಿ ಕೆರೆ ಯವರೆಗೂ ಕೈಗೊಂಡಿರುವ ಬೃಹತ್ ಮಳೆ ನೀರು ಕಾಲುವೆ ತಡೆಗೋಡೆ ಕಾಮಗಾರಿ ಯನ್ನು ಪರಿಶೀಲಿಸಿದ ಆಯುಕ್ತರು ಕಾಮಗಾರಿಯನ್ನು ತ್ವರಿತ ವಾಗಿ ಮುಗಿಸಲು ಸೂಚಿಸಲಾಗಿದೆ. ಅಲ್ಲದೇ ಪೂರ್ವ ನಗರ ಪಾಲಿಕೆ ವ್ಯಾಪ್ತಿ ಯಲ್ಲಿ ಸುಗಮ ಮತ್ತು ಸುರಕ್ಷಿತ ಸಂಚಾರಕ್ಕಾಗಿ ರಸ್ತೆ ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಕೈಗೊಳ್ಳಲಾಗುತ್ತಿದ್ದು, ನಿಗದಿತ ಅವಧಿಯಲ್ಲಿ ಗುಣಮಟ್ಟದೊಂದಿಗೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ. ಈ ವೇಳೆ ಹೆಚ್ಚುವರಿ ಆಯುಕ್ತ (ಅಭಿವೃದ್ಧಿ) ಲೋಖಂಡೆ ಸ್ನೇಹಲ್ ಸುಧಾಕರ್, ಮುಖ್ಯ ಎಂಜಿನಿಯರ್ ಕೃಷ್ಣಮೂರ್ತಿ, ಕಾರ್ಯಪಾಲಕ ಎಂಜಿನಿಯರ್, ಸಹಾಯಕ ಕಾರ್ಯ ಪಾಲಕ ಎಂಜಿನಿಯರ್ ಮತ್ತು ಗುತ್ತಿಗೆದಾರರು ಇದ್ದರು.

ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು
ಕೈಗಾರಿಕಾ ವಲಯ ಹಾಗೂ ವಿವಿಧ
ಖಾಸಗಿ ಸಂಘ ಸಂಸ್ಥೆಗಳ ಸಹಭಾಗಿತ್ವದಲ್ಲಿ

ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

ಬೆಂಗಳೂರಿನ 30ಕ್ಕೂ ಹೆಚ್ಚು ಸ್ಥಳಗಳಲ್ಲಿ 350ಕ್ಕೂ ಹೆಚ್ಚು ಕಾರ್ಯಕ್ರಮಗಳು
(ವಿವರಗಳಿಗೆ ಭೇಟಿ ನೀಡಿ https://blrhubba.in)
ಬೆಂಗಳೂರು ಹಬ್ಬ – 2026
(ದಿನಾಂಕ 16.01.2026 – 25.01.2026)
ಉದ್ಘಾಟನಾ ಕಾರ್ಯಕ್ರಮ: ದಿನಾಂಕ: 16.01.2026 ಶುಕ್ರವಾರ ಸಂಜೆ 5.30 ಗಂಟೆಗೆ | ಸ್ಥಳ: ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮುಂಭಾಗ, ವಿಧಾನಸೌಧ ಬೆಂಗಳೂರು

ಸಾಂಸ್ಕೃತಿಕ ಕಾರ್ಯಕ್ರಮ
ಸಂಗೀತ ಹಾಗೂ ವೈವಿಧ್ಯಮಯ ಕಲೆಗಳ ಪ್ರದರ್ಶನಗಳು, ಸ್ತಬ್ದ ಚಿತ್ರಗಳು, ವಿವಿಧ ಜಾನಪದ ಕಲಾತಂಡಗಳು, ಮಹಿಳೆಯರ ಪೂರ್ಣ ಕುಂಭ, ಸಾಂಪ್ರದಾಯಿಕ ಉಡುಗೆ ತೊಟ್ಟ ವಿದ್ಯಾರ್ಥಿ-ವಿದ್ಯಾರ್ಥಿನಿಯರನ್ನು ಒಳಗೊಂಡ ಮೆರವಣಿಗೆ

ಮೆರವಣಿಗೆಯ ಮಾರ್ಗ
ವಿಧಾನಸೌಧ → ಕಬ್ಬನ್ ಪಾರ್ಕ್ ಒಳಭಾಗದಿಂದ → ಕೇಂದ್ರ ಗ್ರಂಥಾಲಯ ಟೆನ್ನಿಸ್ ಮೈದಾನ → ವಿಕ್ಟೋರಿಯಾ ಪ್ರತಿಮೆ → ಅನಿಲ್ ಕುಂಬ್ಳೆ ವೃತ್ತ → ಮಹಾತ್ಮ ಗಾಂಧಿ ರಸ್ತೆ → ಮಹಾತ್ಮ ಗಾಂಧಿ ಮೆಟ್ರೋ ನಿಲ್ದಾಣದ ರಂಗೋಲಿ ಕಲಾ ಕೇಂದ್ರ

ಉದ್ಘಾಟನೆ ಹಾಗೂ ಜನಪದ ಕಲಾತಂಡಗಳ ಮೆರವಣಿಗೆಗೆ ಚಾಲನೆ
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ
ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಸನ್ಮಾನ್ಯ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್
ಶ್ರೀ ಡಿ.ಕೆ. ಶಿವಕುಮಾರ್, ಮಾನ್ಯ ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಶ್ರೀ ಯು.ಟಿ. ಖಾದರ್, ಸನ್ಮಾನ್ಯ ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ

ಅಧ್ಯಕ್ಷತೆ
ಶ್ರೀ ಶಿವರಾಜ ಎಸ್. ತಂಗಡಗಿ
ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು
ಶ್ರೀ ರಿಜ್ವಾನ್ ಅರ್ಷದ್
ಮಾನ್ಯ ಶಾಸಕರು
ಶಿವಾಜಿನಗರ ವಿಧಾನಸಭಾ ಕ್ಷೇತ್ರ

ವಿಶೇಷ ಆಹ್ವಾನಿತರು
ಡಾ. ಶಾಲಿನಿ ರಜನೀಶ್, ಭಾ.ಆ.ಸೇ.
ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ

ಶ್ರೀ ಶಿವರಾಜ ಎಸ್. ತಂಗಡಗಿ
ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಮೈಸೂರು ರಂಗಾಯಣದ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವದ ಬೆಳ್ಳಿ ಹಬ್ಬದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡ ಸಂದರ್ಭ.

ರಾಜ್ಯದ ಎಲ್ಲಾ ಮಾನ್ಯ ಸಚಿವರು, ಸಂಸದರು, ವಿಧಾನ ಸಭಾ ಮತ್ತು ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಎಲ್ಲಾ ಆಯೋಗ ನಿಗಮ ಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳು

ಸರ್ವರಿಗೂ ಆದರದ ಸುಸ್ವಾಗತ
ಜೆ. ಮಂಜುನಾಥ್, ಭಾ.ಆ.ಸೇ.
ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಕೆ.ಎಂ. ಗಾಯಿತ್ರಿ, ಭಾ.ಆ.ಸೇ.
ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಇರಾನ್ ಭುಗಿಲಿಗೆ 3500 ಮಂದಿ ಬಲಿ

← ಮೊದಲಪುಟದಿಂದ

ಇರಾನ್ ಯೋಧರು ತಮ್ಮದೇ ಜನರನ್ನು ಸಾಯಿಸಲು ಒಪ್ಪುತ್ತಿಲ್ಲ, ಅಲ್ಲದೇ ಕಳೆದ ಜೂನ್‌ನಲ್ಲಿ ನಡೆದ 12 ದಿನಗಳ ಯುದ್ಧ, ಇಸ್ರೋಲ್‌ನೊಂದಿಗಿನ ಸಂಘರ್ಷದಿಂದ ಈಗಾಗಲೇ ಹೈರಾಣಾಗಿರುವ ಅರೆ ಸೇನಾಪಡೆ, ಸಶಸ್ತ್ರ ಪಡೆಗಳು ಈಗಿನ ಆಂತರಿಕ ದಂಗೆಗೆ ಮಾನಸಿಕವಾಗಿ ಸಜ್ಜಾಗಿಲ್ಲ ಎನ್ನಲಾಗಿದೆ.

ವರದಿಗಳ ಪ್ರಕಾರ, ಜ.11ರ ಹೊತ್ತಿಗೆ ತಲಾ 50 ಜನರನ್ನು ಹೊತ್ತ 60 ಬಸ್‌ಗಳು ಇರಾಖ್‌ನಿಂದ ಇರಾನ್ ತಲುಪಿವೆ. ಇರಾಖ್ ಅಧಿಕಾರಿಗಳು ಧಾರ್ಮಿಕ ಯಾತ್ರೆಗೆ ಹೊರಟ ವ್ಯಕ್ತಿಗಳು ಅವರೆಲ್ಲ ಎಂದಿದ್ದರೂ, ಅವರ ಚಹರೆಗಳು ಸಂಪೂರ್ಣ ಅದಕ್ಕೆ ವ್ಯತಿರಿಕ್ತವಾಗಿದ್ದವು. ಎಲ್ಲರೂ ಕಪ್ಪುಬಣ್ಣದ ಟೀಶರ್ಟ್ ಧರಿಸಿದ್ದರು. ಅಲ್ಲಿ ಯಾರೂ ವಯಸ್ಸಾದವರಿರಲಿಲ್ಲ, ಕುಟುಂಬಸ್ಥರ ಸುಳಿವಿರಲಿಲ್ಲ. ಇವರೆಲ್ಲ ಇರಾಖ್ ಯೋಧರೇ, ಅವರೇ ನಿರ್ದಯವಾಗಿ ಪ್ರತಿಭಟನಾಕಾರರನ್ನು ಕೊಲ್ಲುತ್ತಿದ್ದಾರೆ ಎನ್ನಲಾಗಿದೆ.

ರಾಜ್ಯ ಬಜೆಟ್‌ಗೆ 21,000 ಕೋಟಿ ರುಪಾಯಿ ಹೊರೆ

← ಮೊದಲಪುಟದಿಂದ

ಜಿಎಸ್‌ಟಿಯಿಂದ 9000 ಕೋಟಿ ರು. ನಷ್ಟ: ಇನ್ನು ಕೇಂದ್ರ ಸರಕಾರ ಜಾರಿಗೊಳಿಸಿರುವ ಜಿಎಸ್‌ಟಿ 2.0ದಿಂದಾಗಿ ಎಲ್ಲ ರಾಜ್ಯಗಳ ಆದಾಯದ ಮೇಲೆ ಹೊಡೆತ ಬೀಳುತ್ತಿದೆ. ಕರ್ನಾಟಕಕ್ಕೆ ಜಿಎಸ್‌ಟಿ ಸರಳೀಕರಣದಿಂದ ಸುಮಾರು 9000 ಕೋಟಿ ರು. ನಷ್ಟವಾಗಲಿದೆ ಎನ್ನುವುದನ್ನು ಈಗಾಗಲೇ ಸರಕಾರ ಒಪ್ಪಿಕೊಂಡಿದೆ. ಆದ್ದರಿಂದ ರಾಜಸ್ವ ಸ್ವೀಕೃತಿಯಲ್ಲಿ ಬಹುಪಾಲು ಜಿಎಸ್‌ಟಿ ತೆರಿಗೆ ಮೇಲೆ ಆಧರಿಸಿದ್ದ ಸರಕಾರಕ್ಕೆ ಪೆಟ್ಟು ಬಿದ್ದಿದೆ. ಜಿಎಸ್‌ಟಿ ಸರಳೀಕರಣದ ಬಳಿಕ ಕರ್ನಾಟಕದ ಜಿಎಸ್‌ಟಿ ಬೆಳವಣಿಗೆ ಶೇ.12ರಿಂದ ಶೇ 5ಕ್ಕೆ ಇಳಿಕೆಯಾಗಿದೆ. ಇದರಿಂದ 2025-26ನೇ ಸಾಲಿನಲ್ಲಿಯೇ ಸುಮಾರು 5,000 ಕೋಟಿ ರು. ಕೊರತೆಯಾಗಿದೆ. ಅಂದರೆ 2026-27ನೇ ವರ್ಷದಲ್ಲಿ ಈ ಪ್ರಮಾಣ 9,000 ಕೋಟಿ ರು.ಗೆ ಏರಿಕೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

...ರಾಜೀವ್ ಗೌಡಗೆ ನೋಟಿಸ್

← ಮೊದಲಪುಟದಿಂದ

ಶಿಡ್ಲಘಟ್ಟ ನಗರಸಭೆ ವ್ಯಾಪ್ತಿಯಲ್ಲಿ ಖಾಸಗಿ ಕಾರ್ಯಕ್ರಮದ ಸಭೆಯೊಂದಕ್ಕೆ ಸಂಬಂಧ ಪಟ್ಟಂತೆ ಬ್ಯಾನರ್‌ಗಳನ್ನು ನಗರಸಭೆ ವ್ಯಾಪ್ತಿಯಲ್ಲಿ ಹಾಕಿರುವುದರ ಬಗ್ಗೆ ನಗರಸಭೆ ಪೌರಾಯುಕ್ತ ರೊಂದಿಗೆ ದೂರವಾಣಿ ಸಂಭಾಷಣೆ ನಡೆಸುವಾಗ ವ್ಯಕ್ತಿಗತ ನಿಂದನೆ ಮಾಡಿ, ಕೆಟ್ಟ ಪದಗಳನ್ನು ಉಪಯೋಗಿಸಿ ನಿಂದನೆ ಮಾಡಿರುವ ವಿಷಯ ಗಳು ಮಾಧ್ಯಮಗಳಲ್ಲಿ ಬಿತ್ತರಗೊಂಡಿದೆ. ತಮ್ಮ ಈ ವರ್ತನೆ ಹಾಗೂ ತಾವು ಸದರಿ ನಗರಸಭೆ ಪೌರಾಯುಕ್ತರೊಂದಿಗೆ ಆಡಿರುವ ಮಾತುಗಳಿಂದ ಪಕ್ಷಕ್ಕೆ ಮುಜುಗರ ಉಂಟುಮಾಡುತ್ತದೆ ಹಾಗೂ ತಾವು ಪಕ್ಷದ ಶಿಸ್ತನ್ನು ಉಲ್ಲಂಘನೆ ಮಾಡಿರುತ್ತೀರೆಂದು ನೋಟಿಸ್ ನೀಡಲಾಗಿದ್ದು, ವಾರದಲ್ಲಿ ಸ್ಪಷ್ಟನೆ ನೀಡದಿದ್ದರೆ ಶಿಸ್ತು ಕ್ರಮವಹಿಸಲಾಗುವುದು ಎಂದು ಶೋಕಾಸ್ ನೋಟಿಸ್‌ನಲ್ಲಿ ಎಚ್ಚರಿಸಲಾಗಿದೆ.

